# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 72 MONDAY 25-05-2026 PRGI No : KNKAN/26/A0962 Pages:4 Rs.2.00 M: 9742418836


## ಕನ್ನಡಿಗರ ಹಿತ ಕಾಯ್ದದ್ದು ಮೋದಿ ಸರ್ಕಾರ, ಕನ್ನಡಿಗರ ಹೆಸರಿನಲ್ಲಿ ರಾಜಕೀಯ ಮಾಡಿದ್ದು, ಮಾಡುತ್ತಿರುವುದು ಕಾಂಗ್ರೆಸ್: ಪ್ರಿಯಾಂಕ್ ಖರ್ಗೆ ವಿರುದ್ಧ BJP ವಾಗ್ದಾಳಿ

ಬೆಂಗಳೂರು: ರಾಜ್ಯದ ಜಿಡಿಪಿಗೆ ಶೇ 40ರಷ್ಟು ಕೊಡುಗೆ ನೀಡುವ ಬೆಂಗಳೂರಿನ ರಸ್ತೆಗಳು, ನೀರು, ಒಳಚರಂಡಿ, ಸಾರಿಗೆ ಯಾರ ಆಡಳಿತದಲ್ಲಿ ಹದಗೆಟ್ಟಿವೆ? ಯಾಕೆ? ಬೆಂಗಳೂರಿನಿಂದ ಅಷ್ಟು ಪಡೆಯುತ್ತಿರುವ ನಿಮ್ಮ ಸರ್ಕಾರ ಬೆಂಗಳೂರಿಗೆ ಎಷ್ಟು ತಿರುಗಿ ನೀಡಿದೆ? ಎಂದು ರಾಜ್ಯ ಸರ್ಕಾರಕ್ಕೆ ಬಿಜೆಪಿ ಶನಿವಾರ ಪ್ರಶ್ನೆ ಮಾಡಿದೆ.

ತೈಲ ಬೆಲೆ ಏರಿಕೆ ವಿರುದ್ಧ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಬಿಜೆಪಿ ತಿರುಗೇಟು ನೀಡಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ಬೆಲೆ ಏರಿಕೆಯ ಬಗ್ಗೆ ನಿಮ್ಮ ಹೇಳಿಕೆಯಲ್ಲಿ ಕೂಡ ನಿಮ್ಮ ಜನಪರ ಕಾಳಜಿ ಬದಲಿಗೆ ನಿಮ್ಮ ಕೊಳಕು ರಾಜಕೀಯ ಮನಸ್ಥಿತಿಯೇ ಎದ್ದು ಕಾಣುತ್ತಿದೆ. ಜಾಗತಿಕ ಸವಾಲುಗಳು, ಸೂಕ್ಷ್ಮ ಸನ್ನಿವೇಶಗಳು ಗೊತ್ತಿದ್ದರೂ, ದೇಶದ ಬಗ್ಗೆ ಯೋಚಿಸದೆ ನಿಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಕಾಂಗ್ರೆಸ್ ವರ್ತನೆ ಹೊಸದೇನಲ್ಲ ಎಂದು ಟೀಕಿಸಿದ್ದಾರೆ.

ತೈಲ ಬೆಲೆ ಏರಿಕೆ ಮಾಡುತ್ತಿರುವುದು ತೈಲ ಕಂಪನಿಗಳು, ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ಜಾಗತಿಕವಾಗಿ ಕಚ್ಚಾ ತೈಲ ಬೆಲೆ ಏರಿಕೆ, ಅನ್ಯದೇಶಗಳಲ್ಲಿ ತೈಲಬೆಲೆಗಳ ಏರಿಕೆ ಪ್ರಮಾಣ ಇವೆಲ್ಲವೂ ಗೊತ್ತಿದ್ದರೂ ಜನರನ್ನು ದಾರಿ ತಪ್ಪಿಸಲು ನಿಮ್ಮ ರಾಜಕೀಯ ವ್ಯರ್ಥ ಪ್ರಯತ್ನವೇ ನಿಮ್ಮ ಮುತ್ಸದ್ದಿತನವೆಂದು ಪ್ರದರ್ಶಿಸಬೇಡಿ. ಜನರಿಗೆ ಸತ್ಯ




ಗೊತ್ತಿದೆ.

ಪೆಟ್ರೋಲ್ ಬೆಲೆಯಲ್ಲಿ ಶೇ 32% ಗಿಂತ ಯಾರ ಸರ್ಕಾರ ವಸೂಲಿ ಮಾಡುತ್ತಿದೆ? ಹೇಗೂ ನಿಮ್ಮ ಮುಖ್ಯಮಂತ್ರಿಗಳ ಪ್ರಕಾರ ರಾಜ್ಯದ ಹಣಕಾಸು ಪರಿಸ್ಥಿತಿ ದೇಶಕ್ಕಿಂತಲೂ ಉತ್ತಮವಾಗಿದೆಯಲ್ಲವೇ? ಕೇಂದ್ರದ ಮೇಲೆ ಆರೋಪ ಮಾಡುವ ಮುನ್ನ ನಿಮ್ಮ ಸರ್ಕಾರ ವಾಟ್ ಯಾಕೆ ಕಡಿಮೆ ಮಾಡಿಲ್ಲ? ಎಂದು ಪ್ರಶ್ನಿಸಿದ್ದಾರೆ.

ಪ್ರಧಾನಿ ಮೋದಿ ಆಡಳಿತದ ಕಳೆದ 10 ವರ್ಷಗಳಲ್ಲಿ, ದೇಶದಲ್ಲಿ 25 ಕೋಟಿ ಜನರನ್ನು ಬಡತನದಿಂದ ಮೇಲೆತ್ತಲಾಗಿದೆ. ಬಡವರಿಗಾಗಿ 5 ಕೋಟಿ ಮನೆಗಳನ್ನು ನಿರ್ಮಿಸಲಾಗಿದೆ. ದಶಕಗಳಿಂದ 'ಗರೀಬಿ ಹಟಾವೋ' ಎಂದು ಜನರನ್ನು ವಂಚಿಸಿಕೊಂಡೇ ಬಂದ ಕಾಂಗ್ರೆಸ್ಸಿಗರ ಸ್ಲೋಗನ್ ಸಾಧನೆಯನ್ನು ಜನರು ಚೆನ್ನಾಗಿ ಅರ್ಥ ಮಾಡಿಕೊಂಡದ್ದಕ್ಕೆ ಇವತ್ತು ಕಾಂಗ್ರೆಸ್ ಪರಿಸ್ಥಿತಿ ದೇಶದಲ್ಲಿ ಇಷ್ಟು ಹೀನಾಯ ಹಂತದಲ್ಲಿದೆ.

ಈ ಬಗ್ಗೆ ಮಾತನಾಡುವ ಕಿಂಚಿತ್ ನೈತಿಕತೆ ಕೂಡ ನಿಮ್ಮಲ್ಲಿ ಉಳಿದಿಲ್ಲ. ಅಷ್ಟಕ್ಕೂ ಮಾನ್ಯ ಖರ್ಗೆಯವರೇ, ದೇಶದ ಚಿಂತೆ ಮಾಡುವ ಮುನ್ನ, ಮೊದಲು, ನಿಮ್ಮನ್ನು ನಂಬಿ ಅಧಿಕಾರ ನೀಡುತ್ತಲೇ ಬಂದಿರುವ ನಿಮ್ಮ ಜಿಲ್ಲೆಯನ್ನು, ಎಲ್ಲಾ ಮಾನದಂಡಗಳಲ್ಲೂ ಕೊನೆಯಲ್ಲಿರುವ ನಿಮ್ಮ ಜಿಲ್ಲೆಯತ್ತ, ರಾಜ್ಯದ ಅತ್ಯಂತ ಹಿಂದುಳಿದ ತಾಲೂಕುಗಳತ್ತ ಸ್ವಲ್ಪವಾದರೂ ಗಮನಹರಿಸಿ. ಆಮೇಲೆ ಇನ್ನೊಬ್ಬರ ಬಗ್ಗೆ ಮಾತನಾಡುವಿರಂತೆ.

32 ದೇಶಗಳ ಅತ್ಯುನ್ನತ ಗೌರವಗಳನ್ನು ಪಡೆದ ವಿಶ್ವನಾಯಕ ಆದರಣೀಯ ಪ್ರಧಾನಿ ಮೋದಿ ಅವರ ಬಗ್ಗೆ ನಿಮ್ಮ ಅಸಹನೆ ಅರ್ಥವಾಗುತ್ತದೆ. ಇದು ಆಕಾಶ ನೋಡಿ ಮೇಲೆ ಉಗಿದಂತೆ ಎಂದು ಕಿಡಿಕಾರಿದ್ದಾರೆ.

ಭಾರತ ಜಾಗತಿಕ ಸವಾಲುಗಳನ್ನು ಎದುರಿಸುತ್ತಿರುವಾಗ, ಪ್ರಾದೇಶಿಕ ವಾದವನ್ನು ಮಂಡಿಸಿದ್ದೀರಿ! ಕನ್ನಡಿಗರ ಕೊಡುಗೆ ಬಗ್ಗೆ ನಾವೂ ಹೆಮ್ಮೆಪಡುತ್ತೇವೆ. ಆದರೆ ನಿಮ್ಮ ಕುತರ್ಕದ ಬಗ್ಗೆ ನಮ್ಮ ಆಕ್ಷೇಪವಿದೆ. ರಾಜ್ಯದ ಜಿಡಿಪಿಗೆ ಶೇ 40ರಷ್ಟು ಕೊಡುಗೆ ನೀಡುವ ಬೆಂಗಳೂರಿನ ರಸ್ತೆಗಳು, ನೀರು, ಒಳಚರಂಡಿ, ಸಾರಿಗೆ ಯಾರ ಆಡಳಿತದಲ್ಲಿ ಹದಗೆಟ್ಟಿವೆ? ಯಾಕೆ? ಬೆಂಗಳೂರಿನಿಂದ ಅಷ್ಟು ಪಡೆಯುತ್ತಿರುವ ನಿಮ್ಮ ಸರ್ಕಾರ ಬೆಂಗಳೂರಿಗೆ ಎಷ್ಟು ತಿರುಗಿ ನೀಡಿದೆ?

ನಿಮ್ಮ ಗಕಂ ಕಾಲದಲ್ಲಿ (2004–2014) ಕರ್ನಾಟಕಕ್ಕೆ ನಿಮ್ಮ ಸರ್ಕಾರ ನೀಡಿದ್ದು 81,795 ಕೋಟಿ ರೂ. ಓಆಂ ಕಾಲ (2014–2024) ರಾಜ್ಯಕ್ಕೆ ನೀಡಿದ್ದು 2,85,452 ಕೋಟಿ ರೂ.350% ಹೆಚ್ಚಳ ಮಾಡಿದ್ದು ಯಾವ ಸರ್ಕಾರ? ಕನ್ನಡಿಗರ ಹಿತ ಕಾಯ್ದದ್ದು ಮೋದಿ ಸರ್ಕಾರ, ಕನ್ನಡಿಗರ ಹೆಸರಿನಲ್ಲಿ ರಾಜಕೀಯ ಮಾಡಿದ್ದು, ಮಾಡುತ್ತಿರುವುದು ಕಾಂಗ್ರೆಸ್.

ದೇಶದ ಸವಾಲಿನ ಸೂಕ್ಷ್ಮ ಸಂದರ್ಭಗಳಲ್ಲಿ ಇಡೀ ದೇಶ ಒಂದಾಗಿ, ಒಗ್ಗಟ್ಟಿನಿಂದ ಮುನ್ನಡೆಯಬೇಕು ಎನ್ನುವುದನ್ನು ಎಂದಿಗೂ ಅರ್ಥಮಾಡಿಕೊಳ್ಳದ ನಿಮ್ಮ ಪಕ್ಷದ ಬಗ್ಗೆ ಹೆಚ್ಚು ಏನು ಹೇಳುವುದು ಸಾಧ್ಯ? ಕಾಂಗ್ರೆಸ್ ಎಂದಿಗೂ ತನ್ನ ಕೊಳಕು ರಾಜಕೀಯ ಬಿಟ್ಟು ಮೇಲೆ ಎದ್ದು ಬಂದಿಲ್ಲ. ಯಾವ ವಾಸ್ತವವನ್ನೂ ಪರಿಗಣಿಸದೆ ಕೇವಲ ನಿಮ್ಮ ರಾಜಕೀಯದ ಮೂಗಿನ ನೇರಕ್ಕೆ ಮಾತನಾಡುವ ಕಾಂಗ್ರೆಸ್ಸಿಗರಿಗೆ ಜನರೇ ತಕ್ಕ ಪಾಠ ಕಲಿಸುತ್ತಾರೆಂದು ತಿರುಗೇಟು ನೀಡಿದ್ದಾರೆ.

## ರಾಜ್ಯಸಭೆ ಚುನಾವಣೆಗೂ ಸಚಿವ ಸಂಪುಟ ಪುನರಾಚನೆಗೂ ಯಾವುದೇ ಸಂಬಂಧ ಇಲ್ಲ: ಸಚಿವ ಗೃಹ ಸಚಿವ ಪರಮೇಶ್ವರ್

ಬೆಂಗಳೂರು: ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಹಾಗೂ ಸಚಿವ ಸಂಪುಟ ಪುನರಾಚನೆ ಕುರಿತ ಚರ್ಚೆಗಳು ತೀವ್ರಗೊಂಡಿರುವ ನಡುವೆಯೇ, ಗೃಹ ಸಚಿವ ಜಿ.ಪರಮೇಶ್ವರ್ ಮಹತ್ವದ ಹೇಳಿಕೆ ನೀಡಿದ್ದಾರೆ.

ರಾಜ್ಯಸಭೆ ಚುನಾವಣೆಗೂ ಸಚಿವ ಸಂಪುಟ ಪುನರ್‌ರಚನೆಗೂ ಯಾವುದೇ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿರುವ ಅವರು, ಈ ಎರಡೂ ಪ್ರಕ್ರಿಯೆಗಳು ಪ್ರತ್ಯೇಕವಾಗಿ ನಡೆಯಲಿವೆ ಎಂದು ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪರಮೇಶ್ವರ್, "ರಾಜ್ಯಸಭೆ ಚುನಾವಣೆಯ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಪಕ್ಷದ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ನಿರ್ಧರಿಸುತ್ತಾರೆ. ಅದು ನಿಯಮಿತ ಪ್ರಕ್ರಿಯೆ. ಸಚಿವ ಸಂಪುಟ ಪುನರಾಚನೆ ನಿರ್ಧಾರಕ್ಕೂ ಅದಕ್ಕೂ ಸಂಬಂಧ ಇಲ್ಲ ಎಂದು ತಿಳಿಸಿದ್ದಾರೆ.

ಜೂನ್ 18ರಂದು ಕರ್ನಾಟಕದಿಂದ ತೆರವಾಗಲಿರುವ ನಾಲ್ಕು ರಾಜ್ಯಸಭೆ ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಅದರ ಮೊದಲು ಸಚಿವ ಸಂಪುಟ ಪುನರಾಚನೆ ಅಥವಾ ನಾಯಕತ್ವ ಬದಲಾವಣೆ ಕುರಿತು ತೀರ್ಮಾನವಾಗುವ ಸಾಧ್ಯತೆಗಳ ಬಗ್ಗೆ ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ. ಆದರೆ ಈ ಬಗ್ಗೆ ಅನಗತ್ಯ ಊಹಾಪೋಹ ಬೇಡ ಎಂದು



ಪರಮೇಶ್ವರ್ ಅವರು ಹೇಳಿದ್ದಾರೆ.

ಸಚಿವ ಸ್ಥಾನಕ್ಕಾಗಿ ಹಿರಿಯ ಶಾಸಕರು ಒತ್ತಾಯಿಸುತ್ತಿರುವ ವಿಚಾರಕ್ಕೂ ಪ್ರತಿಕ್ರಿಯಿಸಿದ ಅವರು, "ಮೂರು, ನಾಲ್ಕು ಬಾರಿ ಗೆದ್ದಿರುವ ಶಾಸಕರು ಸಚಿವ ಸ್ಥಾನ ಕೇಳುವುದು ತಪ್ಪಲ್ಲ. ಅವರಿಗೆ ಸಾಮರ್ಥ್ಯವೂ ಇದೆ. ಆದರೆ, ಸಚಿವ ಸಂಪುಟದಲ್ಲಿ ಸೇರಿಸಬಹುದಾದ ಸಚಿವರ ಸಂಖ್ಯೆಗೆ 15 ಶೇಕಡಾ ಮಿತಿ ಇದೆ. ಹೀಗಾಗಿ ಎಲ್ಲರಿಗೂ ಅವಕಾಶ ನೀಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ತಮ್ಮ ಖಾತೆ ಬದಲಾವಣೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಪರಮೇಶ್ವರ್, "ನಾನು ಎಂಟು ವರ್ಷಗಳಿಂದ ಗೃಹ ಖಾತೆಯನ್ನು ಸಮರ್ಥವಾಗಿ ನಿರ್ವಹಿಸಿದ್ದೇನೆ. ನನಗೆ ಯಾವುದೇ ಬೇಸರ ಇಲ್ಲ, ನಿರಾಸೆಯೂ ಇಲ್ಲ. ನನಗೆ ಯಾವ ಖಾತೆ ಕೊಟ್ಟರೂ ನಿಭಾಯಿಸುವ ಸಾಮರ್ಥ್ಯ ಇದೆ. ಇನ್ನೂ ದೊಡ್ಡ ಜವಾಬ್ದಾರಿಯನ್ನೂ ಹೊರುವ ಸಾಮರ್ಥ್ಯ ನನ್ನಲ್ಲಿದೆ ಎಂದು ಆತ್ಮವಿಶ್ವಾಸ ವ್ಯಕ್ತಪಡಿಸಿದರು.

## ಅಥಣಿ ಅತ್ಯಾಧುನಿಕ ಕೆ.ಎಂ.ಸಿ. ಹೆರಿಗೆ ಆಸ್ಪತ್ರೆ ಉದ್ಘಾಟನೆ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಹಲ್ಯಾಳ ರಸ್ತೆಯ ಬೃಂದಾವನ ಹೋಟೆಲ್ ಪಕ್ಕದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಕೆ. ಎಂ. ಸಿ. (ಏಒಅ) ಸುಸಜ್ಜಿತ ಹೆರಿಗೆ ಆಸ್ಪತ್ರೆ ಕಟ್ಟಡದ ಉದ್ಘಾಟನಾ ಸಮಾರಂಭವು ಅತ್ಯಂತ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದ ಉದ್ಘಾಟಕರಾಗಿ ಭಾಗವಹಿಸಿದ್ದ ಕಾಂಗ್ರೆಸ್ ಮುಖಂಡ ಹಾಗೂ ಸಮಾಜ ಸೇವಕ ಚಿದಾನಂದ ಸವದಿ ಅವರು ಸಸಿಗೆ ನೀರು ಎರೆಯುವ ಮೂಲಕ ನೂತನ ಸುಸಜ್ಜಿತ ಹೆರಿಗೆ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದರು.

ಅಥಣಿ ಭಾಗದ ಸಾರ್ವಜನಿಕರಿಗೆ, ಅದರಲ್ಲೂ ವಿಶೇಷವಾಗಿ ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಅತ್ಯಾಧುನಿಕ ವೈದ್ಯಕೀಯ ಸೌಲಭ್ಯಗಳು ಒಂದೇ ಸೂರಿನಡಿ ಸಿಗುವಂತಾಗಿರುವುದು ಅತ್ಯಂತ ಶ್ಲಾಘನೀಯ. ಇಂದಿನ ದಿನಗಳಲ್ಲಿ ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಹೆರಿಗೆ ಚಿಕಿತ್ಸೆ ಸಿಗುವುದು ಅತ್ಯಗತ್ಯವಾಗಿದೆ.



ಸರಕಾರಿ ಆಗಲಿ ಅಥವಾ ಖಾಸಗಿ ಆಸ್ಪತ್ರೆಯಲ್ಲಾಗಲಿ, ಚಿಕಿತ್ಸೆ ಪಡೆಯಲು ಬರುವ ಕಡು ಬಡವರಿಗೆ ಚಿಕಿತ್ಸಾ ವೆಚ್ಚ ಭರಿಸಲು ಸಾಧ್ಯವಾಗದಿದ್ದರೆ ಅಂತಹ ರೋಗಿಗಳಿಗೆ ಉಚಿತ ಅಥವಾ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಬೇಕು. ವೈದ್ಯಕೀಯ ವೆಚ್ಚದ ಕೊರತೆಯಿಂದಾಗಿ ಯಾರೂ ಚಿಕಿತ್ಸೆಯಿಂದ ವಂಚಿತರಾಗಬಾರದು. ಚಿಕಿತ್ಸಾ ವೆಚ್ಚ ಭರಿಸಲಾಗದ ಅಸಹಾಯಕ ಬಡ ರೋಗಿಗಳಿಗೆ 'ಶ್ರೀ ಲಕ್ಷ್ಮಣ ಸವದಿ ಫೌಂಡೇಶನ್' ವತಿಯಿಂದ ಆರ್ಥಿಕ ನೆರವು ನೀಡಲಾಗುವುದು, ಎಂದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ನದಿ ಇಂಗಳಗಾಂವ ಗುರುಲಿಂಗ ದೇವರ ಮಠದ ಶ್ರೀ ಮ. ನಿ. ಪ್ರ. ಸಿದ್ದಲಿಂಗ ಸ್ವಾಮೀಜಿ ಹಾಗೂ ಅಥಣಿ ಶೆಟ್ಟರ ಮಠದ ಶ್ರೀ ಮ. ನಿ. ಪ್ರ. ಮರುಳಸಿದ್ಧ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಆರೋಗ್ಯ ಸೇವೆಯು ಅತ್ಯಂತ ಪವಿತ್ರವಾದದ್ದು. ತಾಯಿ ಮತ್ತು ಮಗುವಿನ ಪ್ರಾಣ ರಕ್ಷಿಸುವ ಹೆರಿಗೆ ಆಸ್ಪತ್ರೆಗಳು ತಾಲೂಕಿನ ಜನರಿಗೆ ವರದಾನವಾಗಲಿ ಎಂದು ಹಾರೈಸಿದರು.

ವೈದ್ಯರಾದ ಡಾ. ಸಂಜಯ ಕುರೇನ್ನವರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಆಸ್ಪತ್ರೆಯ ಉದ್ದೇಶಗಳನ್ನು ವಿವರಿಸಿದರು.

ಇದೇ ಸಮಯದಲ್ಲಿ ಡಾ. ರಶ್ಮಿ ಎಸ್. ಕುರೇನ್ನವರ, ಡಾ. ಸೋಮಶೇಖರ್ ಪಾಟೀಲ್, ಆಸ್ಪತ್ರೆಯಲ್ಲಿ ಲಭ್ಯವಿರುವ ಅತ್ಯಾಧುನಿಕ ಚಿಕಿತ್ಸಾ ಉಪಕರಣಗಳ ಹಾಗೂ ಸೌಲಭ್ಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಸಮಾರಂಭದಲ್ಲಿ ಡಾ.ವಿಜಯ ಕುರೆಣ್ಣವರ,ಜಿ ಎಮ್ ತೇವರಮನಿ,ಗುತ್ತಿಗೆದಾರ ಶಿವರುದ್ರ ಗೂಳಪ್ಪನ್ನವರ ಸೇರಿದಂತೆ ಸಾರ್ವಜನಿಕರು ಹಾಗೂ ವೈದ್ಯಕೀಯ ಸಿಬ್ಬಂದಿಯವರು ಉಪಸ್ಥಿತರಿದ್ದರು.

## ಸಂ.ಕಾರ್ಯದರ್ಶಿಯಾಗಿ ನೇಮಕ

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಲಕ್ಷ್ಮೇಶ್ವರ ತಾಲೂಕ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಗುರುರಾಜ್ ಹವಳದ ಅವರು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ. ಬೆಂಗಳೂರಿನಲ್ಲಿ ಇತ್ತೀಚೆಗೆ ಜರುಗಿದ ಕಾರ್ಯಕ್ರಮದಲ್ಲಿ ರಾಜ್ಯ ನೌಕರ ಸಂಘದ ಅಧ್ಯಕ್ಷರಾದ ಸಿ ಎಸ್ ಷಡಕ್ಷರಿ ಅವರು ಘೋಷಣಾ ಪತ್ರವನ್ನು ವಿತರಿಸಿ ಸನ್ಮಾನಿಸಿದರು. ಗುರುರಾಜ್ ಹವಳದವರ ನೌಕರ ಸಂಘದ ಆಯ್ಕೆಗೆ ಎಂ ಎ ನದಾಫ್ ಎಂಡಿ ವಾರದ ಬಸವರಾಜ ಯರಗುಪ್ಪಿ



ಡಿಹೆಚ್ ಪಾಟೀಲ್ ಎಲ್ ಎನ್ ನಂದಣ್ಣವರ ಎಂ ಎಸ್ ಹಿರೇಮಠ ಬಿಎಸ್ ಹರ್ಲಾಪುರ ಚಂದ್ರುನಿಕ ಡಿಡಿ ಲಮಾಣಿ ಮುಂತಾದವರು ಅಭಿನಂದಿಸಿದ್ದಾರೆ.

## ಬಿತ್ತನೆಗೆ ಭರದ ಸಿದ್ಧತೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಮುಂಗಾರು ಪೂರ್ವದ ಮತ್ತು ಮುಂಗಾರಿನ ಮಳೆಗಳು ಬಿತ್ತನೆಗೆ ಅನುಕೂಲಕರವಾಗಿದ್ದು ರೈತರು ಜಮೀನುಗಳನ್ನು ಸ್ವಚ್ಛಗೊಳಿಸಿ ಬಿತ್ತನೆಗೆ ಸಿದ್ಧತೆ ನಡೆಸಿದ್ದಾರೆ.

ತಾಲೂಕಿನಲ್ಲಿ ಪ್ರಮುಖ ಬೆಳೆಯಾದ ಹೆಸರು ಶೇಂಗಾ ಗೋವಿನ ಜೋಳದ ಬಿತ್ತನೆಗೆ ಸಿದ್ಧತೆ ನಡೆಸಿದ್ದು ರೈತರು ಬೀಜ ಮತ್ತು ಗೊಬ್ಬರಗಳ ಖರೀದಿಗೆ ಮುಂದಾಗಿದ್ದಾರೆ.

ತಾಲೂಕಿನಲ್ಲಿ ಹದವರ್ತಿ ಮಳೆಯಾಗಿರುವ ಪ್ರದೇಶಗಳಲ್ಲಿ ಅದರಲ್ಲಿ ವಿಶೇಷವಾಗಿ ಕೆಂಪುಮಣ್ಣಿನ ಜಮೀನುಗಳಲ್ಲಿ ಈಗಾಗಲೇ ರೈತರು ಹೆಸರು ಬಿತ್ತನೆಗೆ ಚಾಲನೆ ನೀಡಿದ್ದಾರೆ.

ಹರದಗಟ್ಟಿ ಸೇರಿದಂತೆ ಅನೇಕ ಕಡೆ ರೈತರು ಹೆಸರು ಮತ್ತು ಗೋವಿನ ಜೋಳದ ಬಿತ್ತನೆ ಕಾರ್ಯದಲ್ಲಿ ನಿರತರಾಗಿದ್ದಾರೆ.

## ಅಪಾರ ಅಭಿಮಾನಿಗಳ ಮಧ್ಯೆ ಶಾಸಕ ರಾಜು ಕಾಗೆಯವರ ಹುಟ್ಟು ಹಬ್ಬ ಆಚರಣೆ
## ಜನ್ಮ ನೀಡಿದ ತಂದೆ–ತಾಯಿಯ, ಮತದಾರರ ಋಣ ಎಂದಿಗೂ ತಿರಿಸಲಾಗದು; ರಾಜು ಕಾಗೆ

**ಬೆಳಗಾವಿ ವಾರ್ತೆ ಮೋಳೆ;–** ಜನರ ನೋವು, ನಲಿವು, ಅವರ ಕಷ್ಟ, ಸುಖಗಳಲ್ಲಿ ಬಾಗಿಗಳಾಗುವವರು ಒಳ್ಳೆಯ ನಾಯಕರಾಗುತ್ತಾರೆ. ಅಂಥ ಶಾಸಕರನ್ನು ನಾವು ಪಡೆದಿದ್ದೇವೆ ಎಂದು ಜುಗೂಳ ಪಿಕೆಪಿಎಸ್ ಅಧ್ಯಕ್ಷ ಅಣ್ಣಾಸಾಬ ಪಾಟೀಲ ಹೇಳಿದರು.

ಗುರುವಾರ ಕಾಗವಾಡ ಶಾಸಕ ರಾಜು ಕಾಗೆಯವರ 68 ನೇ ಹುಟ್ಟು ಹಬ್ಬದ ದಿನದಂದು ಬೆಂಗಳೂರಿನಲ್ಲಿ ಸನ್ಮಾನಿಸಿ ಮಾತನಾಡುತ್ತಿದ್ದರು. ಸುಮಾರು ಅರ್ಧ ಶತಮಾನದಷ್ಟು ಕಾಲ ರಾಜಕೀಯದಲ್ಲಿರುವ ಶಾಸಕ ರಾಜು ಕಾಗೆಯವರು ಈ ಕ್ಷೇತ್ರದ ಜನರ ಭಾವನೆಗಳನ್ನು ಅರಿತು ಅವರಿಗೆ ಸ್ಪಂದಿಸುತ್ತಾರೆ. ಅವರೊಬ್ಬ ನಾಡು ಕಂಡ ಧೀಮಂತ ನಾಯಕರು ಎಂದು ಅಧ್ಯಕ್ಷ ಅಣ್ಣಾಸಾಬ ಪಾಟೀಲ ಹೇಳಿದರು.

ಶಾಸಕ ರಾಜು ಕಾಗೆ ಮುಖಂಡರ ಸನ್ಮಾನ ಸ್ವೀಕರಿಸಿ ಮಾತನಾಡಿ ಈ ನನ್ನ ಕ್ಷೇತ್ರದ ಜನರ ಆಶೀರ್ವಾದದಿಂದ ರಾಜಕೀಯದಲ್ಲಿ ಐದು ಬಾರಿ ಶಾಸಕನಾಗಿ, ಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷನಾಗಿ, ವಾಯುವ್ಯ ಕರ್ನಾಟಕರಸ್ತೆ ಸಾರಿಗೆ ಸಂಸ್ಥೆಯ



ಮೋಳೆ: ಕಾಗವಾಡ ಶಾಸಕ ರಾಜುಕಾಗೆಯವರನ್ನು ಜುಗೂಳ ಪಿಕೆಪಿಎಸ್ ಅಧ್ಯಕ್ಷ ಅಣ್ಣಾಸಾಬ ಪಾಟೀಲ,ಕಾಕಾ ಪಾಟೀಲ ಮತ್ತಿತರರು ಸನ್ಮಾನಿಸುತ್ತಿರುವ ಚಿತ್ರ.

ಅಧ್ಯಕ್ಷನಾಗಿ ಉಚ್ಚ ಸ್ಥಾನ ಪಡೆದೆ. ಜನಸೇವೆಯೇ ಜನಾರ್ದನನ ಸೇವೆ ಎಂಬ ನಂಬಿಕೆ ಇಟ್ಟವನು ನಾನು. ಈ ಕ್ಷೇತ್ರದ ಜನರ ಋಣ ನನ್ನ ಮೇಲೆ ಬಹಳಷ್ಟಿದೆ. ಜೀವಿತದ ಕೊನೆಯವರೆಗೂ ಅವರ ಸೇವೆ ಮಾಡಿದರೂ ತೀರಿಸಲಾಗದು.

ಜನ್ಮ ನೀಡಿದ ತಂದೆ ತಾಯಿಯ ಋಣ,ವಿದ್ಯೆ ಕಲಿಸಿದ ಗುರುವಿಣ ಋಣ,ಹಾಗೂ ಮತದಾರರ ಋಣ ಎಂದಿಗೂ ತೀರಿಸಲಾಗದು. ಆದರೆ ನನ್ನ ಶಕ್ತಿಮೀರಿ ಕ್ಷೇತ್ರದ ಅಭಿವೃದ್ಧಿಗಾಗಿ ಶ್ರಮಿಸಿ ಮತದಾರರ ಋಣದ ಭಾರವನ್ನು ಅಲ್ಪ ಮಟ್ಟಿಗೆ ಕಡಿಮೆ ಮಾಡಿಕೊಳ್ಳುತ್ತಿದ್ದೇನೆ ಎಂದು ಶಾಸಕ ರಾಜು ಕಾಗೆ ಹೇಳಿದರು.

ಈ ವೇಳೆ ಮುಖಂಡರಾದ ಅಣ್ಣಾಸಾಬ ಪಾಟೀಲ, ಕಾಕಾ ಪಾಟೀಲ, ಸುಭಾಷ ಪಾಟೀಲ,ರಾಜಗೌಡ ಪಾಟೀಲ,ಸೌರಭ ಪಾಟೀಲ,ರಾಜಾರಾಮ, ಗಡಗೆ,ರಮೇಶ ಚೌಗುಲೆ, ಸುರೇಶ ಪಾಟೀಲ,ಗಂಗಾಧರ ಜೋರಾಪೂರ, ರಿಯಾಜ ಸನದಿ, ರಾವಸಾಬ ಐಹೊಳಿ,ರವಿಕಾಂತ ಪಾಟೀಲ, ಪ್ರಕಾಶ ಪಾಟೀಲ, ಓಂ.ಪ್ರಕಾಶ ಡೊಳ್ಳಿ, ಬಾಹು ಪತ್ತಾರ, ಘೂಳಪ್ಪ ಜತ್ತಿ, ಶಿವಾನಂದ ಗೊಲಬಾಂವಿ, ಅನೀಲ ಕಪಲಿ, ಸೇಖಇದಂತೆ ಅನೇಕರು ಬೆಂಗಳೂರಿಗೆ ತೆರಳಿ ಶಾಸಕ ರಾಜು ಕಾಗೆಯವರಿಗೆ ಶುಭ ಕೋರಿದರು.

> "ನನ್ನ ಹುಟ್ಟು ಹಬ್ಬದ ದಿನದಂದು ನಾವು ಬೆಂಗಳೂರಿನಲ್ಲಿದ್ದರೂ ಕೂಡ ಸಾವಿರಾರು ಕಾರ್ಯಕರ್ತರು, ಮುಖಂಡರು, ಅಭಿಮಾನಿಗಳು, ಅಧಿಕಾರಿಗಳು, ಬೆಂಗಳೂರಿಗೆ ಬಂದು ನನ್ನ ಹುಟ್ಟು ಹಬ್ಬಕ್ಕೆ ಶುಭಾಶಯ ಕೋರಿದರು. ಇದಕ್ಕೆ ಅನ್ನೋದು ಋನಾನುಬಂಧ."
>
> **ರಾಜು ಕಾಗೆ**
> **ಕಾಗವಾಡ ಶಾಸಕ**

## ತಜ್ಞವೈದ್ಯ, ವೈದ್ಯಾಧಿಕಾರಿಗಳ ನೇಮಕಕ್ಕೆ ಅರ್ಜಿ

ಬಾಗಲಕೋಟೆ: ಬಾಗಲಕೋಟೆ ಜಿಲ್ಲೆಯ ತಾಲೂಕಾ ಆಸ್ಪತ್ರೆಗಳು, ತಜ್ಞ ವೈದ್ಯಕರು ಮತ್ತು ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರು & ಹಿರಿಯ ವೈದ್ಯಾಧಿಕಾರಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹುದ್ದೆಗೆ ಗುತ್ತಿದೆ ಆಧಾರದ ಮೇಲೆ ನೇಮಕಾತಿಗಾಗಿ ಪ್ರತಿ ದಿನ ನೇರ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃತಿ ಲೋಕಾರ್ಪಣೆ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ, ಪಿ ಎಚ್ ಡಿ ಪದವಿ ಪಡೆದ, ಪದೋನ್ನತಿ ಹೊಂದಿದ, ನಿವೃತ್ತಿ ಹೊಂದಿದ, 60 ವರ್ಷದ, ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ಗಣ್ಯರನ್ನು ಪ್ರೊ ಎಸ್ ವಿ ಪಟ್ಟಣಶೆಟ್ಟಿ ಅವರ 83ನೇ ಹುಟ್ಟು ಹಬ್ಬದ ಸಂಭ್ರಮದಲ್ಲಿ ಹಾಗೂ ಪ್ರೊ ಎಸ್ ವಿ ಪಟ್ಟಣಶೆಟ್ಟಿ ಅವರ ವಚನ ಸುಧೆ, ತುಪ್ಪದ ತಲೆಯವರು ಮತ್ತು ಸಂಕ್ಷಿಪ್ತ ಕನ್ನಡ ಸಾಹಿತ್ಯ ಚರಿತ್ರೆ ಎಂಬ ಮೂರು ಕೃತಿಗಳ ಲೋಕಾರ್ಪಣೆ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಸ್ವಾಮೀಜಿಗಳ, ಗಣ್ಯರ , ಸಾವಿರಾರು ಜನರ ಉಪಸ್ಥಿತಿಯಲ್ಲಿ ಗೌರವದಿಂದ ಆತ್ಮೀಯ ವಾಗಿ ನೆನಪಿನ ಕಾಣಿಕೆ, ಶಾಲು, ಮಾಲಾ ರ್ಪಣೆ ಮಾಡಿ ಹೃದಯ ಸ್ಪರ್ಶಿಯಾಗಿ ಸನ್ಮಾನಿಸಿದರು. ಆಶೀರ್ವದಿಸಿದರು, ಶುಭ ಕೋರಿದರು. ರೇವಾ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪಡೆದ, ಬೆಂಗಳೂರು

ಸರಕಾರಿ ಕಲಾ ಮಹಾವಿದ್ಯಾಲಯದ ಅಸೋಸಿಯೇಟ್ ಪ್ರೊಫೆಸರ್ ಡಾ. ಪೂರ್ಣಿಮಾ ಬಗಲಿ, ಬೆಂಗಳೂರು, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ,ಇಲಾಖೆಯ ಉಪ ಕಾರ್ಯದರ್ಶಿ ಉಮಾದೇವಿ, ಬೆಂಗಳೂರು, ಕರ್ನಾಟಕ ರಾಜ್ಯಾಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭು ಶಂಕರ್, ಕರ್ನಾಟಕ ವಿಶ್ವವಿದ್ಯಾಯದಿಂದ ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಷಯದಲ್ಲಿ ಪಿ ಎಚ್ ಡಿ ಪದವಿ ಪಡೆದಿರುವ, ಕಳೆದ 23 ವರ್ಷಗಳಿಂದ ಕರ್ನಾಟಕ ಲಿಂಗಾಯತ ಶಿಕ್ಷಣ ಸಂಸ್ಥೆಯಲ್ಲಿ ಗ್ರಂಥಪಾಲಕರಾಗಿ ಸೇವೆ ಸಲ್ಲಿಸುತ್ತಿರುವ ಜೊತೆಗೆ ಸಾಹಿತ್ಯ, ಸಂಗೀತ, ಸಾಂಸ್ಕೃತಿಕ, ಧಾರ್ಮಿಕ, ಸಾಮಾಜಿಕ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಪ್ರೊ ಎಸ್ ವಿ ಪಟ್ಟಣಶೆಟ್ಟಿ ಅವರ 83ನೇ ಹುಟ್ಟು ಹಬ್ಬದ ಸಂಭ್ರಮ ಹಾಗೂ ಪ್ರೊ ಎಸ್ ವಿ ಪಟ್ಟಣಶೆಟ್ಟಿ ಅವರ ವಚನ ಸುಧೆ, ತುಪ್ಪದ ತಲೆಯವರು ಮತ್ತು ಸಂಕ್ಷಿಪ್ತ ಕನ್ನಡ ಸಾಹಿತ್ಯ ಚರಿತ್ರೆ ಎಂಬ ಮೂರು ಕೃತಿಗಳ ಜೊತೆಗೆ ಹಲವಾರು ಕೃತಿಗಳನ್ನು ರಚಿಸಿರುವ, ಬಸವತತ್ವ ಚಿಂತಕರು, ಪ್ರಸಾರಕರು, ಬಸವ ಪರಿಸರ ಸಂರಕ್ಷಣಾ ಸಮಿತಿಯ ಅಧ್ಯಕ್ಷರು, ಬಸವ ಕೇಂದ್ರದ ಕಾರ್ಯಾಧ್ಯಕ್ಷರು, ನಿವೃತ್ತ ಪ್ರಾಧ್ಯಾಪಕರು, ಸಾಹಿತಿಗಳು , ಹಿರಿಯರು, ಮಾರ್ಗದರ್ಶಕರು, ಹಿತೈಸಿಗಳಾದ ಪ್ರೊ ಎಸ್.ವಿ.ಪಟ್ಟಣಶೆಟ್ಟಿ ಅವರಿಗೆ ಗೌರವದಿಂದ ಹುತ್ಪೂರ್ವಕವಾಗಿ ಸನ್ಮಾನ ಮಾಡಿದರು. ಕಾರ್ಯಕ್ರಮವನ್ನು ಹಿರಿಯ ಪತ್ರಕರ್ತರಾದ, ಪ್ರೊ ಎಸ್.ವಿ.ಪಟ್ಟಣಶೆಟ್ಟಿ ಅವರ ಮಗ ಗಿರೀಶ್ ಪಟ್ಟಣಶೆಟ್ಟಿ ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದೊಂದಿಗೆ ಅತ್ಯಂತ ವ್ಯವಸ್ಥಿತವಾಗಿ, ಅಚ್ಚುಕಟ್ಟಾಗಿ, ರುಚಿ, ಶುಚಿಯಾದ ಪ್ರಸಾದ್ ದ ಜೊತೆಗೆ ಆಯೋಜನೆ ಮಾಡಿದ್ದರು. ಮುಂಡರಗಿ ಶ್ರೀ ಜಗದ್ಗುರು ತೋಂಟದಾರ್ಯ ಶಾಖಾ ಮಠದ ಪರಮಪೂಜ್ಯ ಶ್ರೀ ನಿಜಗುಣಪ್ರಭು ತೋಂಟದಾರ್ಯ ಮಹಾಸ್ವಾಮಿಗಳು, ಕರ್ನಾಟಕ ಸರ್ಕಾರದ ಬಸವ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ ವೀರಣ್ಣ ರಾಜೂರ, , ಲೆಕ್ಕಪರಿಶೋಧಕ ಸಿಎ ನಟರಾಜ್ ಮೂರಶಿಳ್ಳಿ , ಕನ್ನಡ ಪ್ರಭ ಬ್ಯುರೋ ಮುಖ್ಯಸ್ಥ ಮಲ್ಲಿಕಾರ್ಜುನ ಸಿದ್ದಣ್ಣನವರ, ಧಾರವಾಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನ ಅಧ್ಯಕ್ಷ ಡಾ ಲಿಂಗರಾಜ ಅಂಗಡಿ, ಮಾಜಿ ಸಂಸದ ಐ ಜಿ ಸನದಿ, ಜಾಗತಿಕ ಲಿಂಗಾಯತ ಮಹಾಸಭಾದ ಧಾರವಾಡ ಜಿಲ್ಲಾಧ್ಯಕ್ಷ ಎಂ ವಿ ಗೊಂಗಡಶೆಟ್ಟಿ, ಪ್ರೊ ಕೆ ಎಸ್ ಕೌಜಲಗಿ, ಪ್ರೊ ಶೋಭಾ ಜಾಬಿನ್, ಪ್ರತಿಭಾ ಪಟ್ಟಣಶೆಟ್ಟಿ , ಡಾ ಮೈತ್ರೇಯಿಣಿ ಗದಿಗೆಪ್ಪ ಗೌಡರ, ಗಿರೀಶ್ ಪಟ್ಟಣಶೆಟ್ಟಿ, ನಿವೃತ್ತ ಪ್ರಾಚಾರ್ಯ ಡಾ ಲಿಂಗರಾಜ ಡಿ. ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ ಪ್ರೊ ಎಸ್.ಎಂ. ಸಾತೃತಿ ರಾಠ ' , ಭರತ್, ವಿಭವ, ಪ್ರಣವ, ಪ್ರಿಯಾ ಬಗಲಿ, ಆರ್ ಸಿ ಹಲಗತ್ತಿ, ವಿ ಬಿ ನಿಟಾಲಿ, ವಿ ಜಿ ಪಾಟೀಲ್, ಚನ್ನಬಸಪ್ಪ ಧಾರವಾಡ 'ಶೆಟ್ಟರ್, ಪ್ರೊ ನಾಗವೇಣಿ, ಮೃತ್ಯುಂಜಯ ಮಟ್ಟಿ , ಎನ್ ಬಿ ಬೆಳ್ಳಿಗಟ್ಟಿ, ಬಿ ವಿ ಅಂಗಡಿ , ಪ್ರೊ ಎಸ್ ಆರ್ ಆಶಿ, ಕೆ ಎಸ್ ಇನಾಮತಿ , ಪ್ರಭು ಅಂಗಡಿ, ಪ್ರಭು ಶೆಟ್ಟರ್, ವಿಜಯ ಬಾಕಳೆ , ಡಾ ಬಸವ ಕುಮಾರ ತಲವಾಯಿ, ಬಸವರಾಜ ಹೊಸ ಕೇರಿ , ಮಲ್ಲಿಕಾರ್ಜುನ ಕಮ್ಮಾರ, ವೀರಣ್ಣ ಗೋವೇಶ್ವರ , ಬಸವರಾಜ್ ಯಕಲಾ ಸಪೂರ , ಸಿದ್ದಲಿಂಗೇಶ್ ವಾಲಿ, ಪ್ರೊ ವಿ. ಬಿ. ಮಾಗನೂರ, ಶಿವಾನಂದ ಬೆನ್ನಾಳೆ , ಎಂ ಪಿ ಕುಂಬಾರ , ಡಿ ಆರ್ ಕುಂಬಾರ , ವಿಜಯಲಕ್ಷ್ಮಿ ಗಂಗಲ್, ಶಾಂತಿ ಪಟ್ಟಣ ಶೆಟ್ಟಿ, ಡಾ ವೀರೇಶ್ ಹಂಡಗಿ , ಶಿವಯೋಗಿ ಮೂಖರ್ಂಡೆ, ವಸಂತ್ ಅಗಸಿಮನಿ, ಬಿ ಎಸ್ ಮಾಳವಾಡ , ವಿದ್ಯಾ ವಂಟಮುರಿ, ಸಿದ್ದಮ್ಮ, ಅಜ್ಜಪ್ಪ ಬೆಂಡಿಗೇರಿ, ಸೇರಿದಂತೆ ಪ್ರೊ ಎಸ್ ವಿ ಪಟ್ಟಣಶೆಟ್ಟಿ ಅವರ ಸ್ನೇಹಿತರು, ಬಂಧುಗಳು, ಅಪಾರ ಸಂಖ್ಯೆಯಲ್ಲಿ ಭಾಗವಹಿಸಿ. ಪ್ರೊ ಎಸ್ ವಿ ಪಟ್ಟಣಶೆಟ್ಟಿ ಅವರಿಗೆ ಹುಟ್ಟು ಹಬ್ಬದ ಶುಭಾಶಯ ಕೋರಿದರು.

# ವೈದ್ಯ ವೃತ್ತಿ ಅತ್ಯಂತ ಪವಿತ್ರವಾದದ್ದು

**ಬೆಳಗಾವಿ ವಾರ್ತೆ ಅಥಣಿ:** ವೈದ್ಯಕೀಯ ವೃತ್ತಿಯು ಅತ್ಯಂತ ಪವಿತ್ರವಾದದ್ದು. ಆರೋಗ್ಯವಂತ ಸಮಾಜವನ್ನು ಕಟ್ಟಲು ಮತ್ತು ಅಮೂಲ್ಯವಾದ ಆರೋಗ್ಯ ಸಂಪತ್ತನ್ನು ಕಾಪಾಡುವಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದಾಗಿದೆ. ವೈದ್ಯ ವೃತ್ತಿ ಕೇವಲ ಒಂದು ಉದ್ಯೋಗವಲ್ಲ , ಅದೊಂದು ಮಹಾನ್ ಸಮಾಜ ಸೇವೆಯಾಗಿದೆ ಎಂದು ಖ್ಯಾತ ಸ್ತ್ರೀರೋಗ ತಜ್ಞ ಡಾ. ಸೋಮಶೇಖರ ಪಾಟೀಲ ಹೇಳಿದರು.



ಅವರು ಗುರುವಾರ ಪಟ್ಟಣದ ಹಲ್ಯಾಳ ರಸ್ತೆಗೆ ಹೊಂದಿಕೊಂಡಿರುವ ಕೆ ಎಂ ಸಿ ಆಸ್ಪತ್ರೆಯ ನೂತನ ಕಟ್ಟಡ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಪುರಾತನ ಕಾಲದಿಂದಲೂ ವೈದ್ಯರ ಸೇವೆ ದೇವರ ಸಮಾನ ಎಂದು ಕರೆಯಲಾಗಿದೆ. ಅವರ ಶ್ರಮ ಮತ್ತು ನಿಸ್ವಾರ್ಥ ಸೇವೆಗೆ ಎಂದಿಗೂ ಬೆಲೆ ಕಟ್ಟಲಾಗದು, ರೋಗಿಗಳ ನೋವನ್ನ ತಮ್ಮ ನೋವು ಎಂದು ಭಾವಿಸಿ ತಮ್ಮ ನಿದ್ದೆ, ಹಸಿವು, ಸುಖವನ್ನ ತ್ಯಾಗ ಮಾಡಿ ನಿರಂತರ ರೋಗಿಗಳ ಸೇವೆಯಲ್ಲಿ ಇರುತ್ತಾರೆ. ಹೆರಿಗೆ ಸಂದರ್ಭದಲ್ಲಿ ತಾಯಿ ಮತ್ತು ಮಗು ಎರಡೂ ಜೀವಗಳು ಮುಖ್ಯವಾಗಿರುತ್ತದೆ. ಸಂಕಷ್ಟದಲ್ಲಿರುವ ಜೀವಗಳನ್ನ ರಕ್ಷಣೆ ಮಾಡುವುದರ ಜೊತೆಗೆ ರೋಗಿಗಳ ಮತ್ತು ಅವರ ಕುಟುಂಬದಲ್ಲಿ ಆಶಾಕಿರಣ ಮೂಡಿಸುವ ಕೆಲಸವನ್ನು ವೈದ್ಯರು ಮಾಡುತ್ತಾರೆ. ವೈದ್ಯರ ಜೊತೆಗೆ ನುರಿತ ಮತ್ತು ನಿರಂತರ ಸೇವೆ ಸಲ್ಲಿಸುವ ಸಿಬ್ಬಂದಿಗಳ ಸಹಕಾರದಿಂದ ವೈದ್ಯರಿಗೆ ಮತ್ತು ಆಸ್ಪತ್ರೆಗೆ ಒಳ್ಳೆಯ ಶ್ರೇಯಸ್ಸು ದೊರಕುತ್ತದೆ ಎಂದರು.

ಗ್ರಾಮೀಣ ಪ್ರದೇಶದ ರೈತನ ಮಗನಾಗಿ ಡಾ.ಸಂಜಯ ಕುರೆನ್ನವರ ನನ್ನ ಶಿಷ್ಯನಾಗಿ ವೈದ್ಯಕೀಯ ಕ್ಷೇತ್ರದಲ್ಲಿ ಮಾಡಿರುವ ಸಾಧನೆ ನಮ್ಮೆಲ್ಲರಿಗೆ ಹೆಮ್ಮೆ ಪಡುವಂತದ್ದು, ಅಥಣಿಯಲ್ಲಿ ಕೆಎಂಸಿ ಆಸ್ಪತ್ರೆ ಆರಂಭಿಸುವ ಮೂಲಕ ತಮ್ಮ ವೈದ್ಯಕೀಯ ಸೇವೆ ಆರಂಭಿಸಿರುವುದು ನನಗೆ ಸಂತಸ ತಂದಿದೆ. ಈ ಆಸ್ಪತ್ರೆಯ ಮೂಲಕ ಈ ಭಾಗದ ಜನರಿಗೆ ಉತ್ತಮ ಸೇವೆಗಳು ದೊರಕಲಿ ಎಂದು ಶುಭ ಹಾರೈಸಿದರು.

ಈ ವೇಳೆ ಕೆ ಎಂ ಸಿ ಆಸ್ಪತ್ರೆಯ ನೂತನ ಕಟ್ಟಡವನ್ನು ಉದ್ಘಾಟಿಸಿದ ಯುವ ಮುಖಂಡ ಚಿದಾನಂದ ಸವದಿ ಮಾತನಾಡಿ

ವೈದ್ಯರಿಲ್ಲದ ಸಮಾಜವನ್ನು ನಾವು ಕಲ್ಪಿಸಿಕೊಳ್ಳುವುದು ಅಸಾಧ್ಯ. ಅವರ ಸೇವೆ ಇಲ್ಲದೆ, ನಮ್ಮ ಆರೋಗ್ಯ ರಕ್ಷಣೆ ಮತ್ತು ಉತ್ತಮ ಜೀವನ ಸಾಧ್ಯವಿಲ್ಲ ಡಾ. ವಿಜಯ್ ಕುರೆನ್ನವರ ಹಾಗೂ ಡಾ.ಸಂಜಯ ಕುರೆನ್ನವರ ವೈದ್ಯಕೀಯ ಕ್ಷೇತ್ರದಲ್ಲಿ ಮಾಡುತ್ತಿರುವ ಸಾಧನೆ ಮತ್ತು ಆರೋಗ್ಯ ಸೇವೆ ಜನ ಮೆಚ್ಚುಗೆ ಪಾತ್ರವಾಗಿದೆ.

ಅಥಣಿ ಭಾಗದ ಸಾರ್ವಜನಿಕರಿಗೆ, ಅದರಲ್ಲೂ ವಿಶೇಷವಾಗಿ ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಅತ್ಯಾಧುನಿಕ ವೈದ್ಯಕೀಯ ಸೌಲಭ್ಯಗಳು ಒಂದೇ ಸೂರಿನಡಿ ಸಿಗುತ್ತಿರುವುದು ಅತ್ಯಂತ ಹೆಮ್ಮೆಯ ಸಂಗತಿ. ಇಂದಿನ ದಿನಗಳಲ್ಲಿ ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಹೆರಿಗೆ ಚಿಕಿತ್ಸೆ ಸಿಗುವುದು ಅತ್ಯಗತ್ಯವಾಗಿದೆ. ಆಸ್ಪತ್ರೆಗೆ ಚಿಕಿತ್ಸೆ ಪಡೆಯಲು ಬರುವ ಕಡು ಬಡವರಿಗೆ ಚಿಕಿತ್ಸಾ ವೆಚ್ಚ ಭರಿಸಲು ಸಾಧ್ಯವಾಗದಿದ್ದರೆ ಅಂತಹ ರೋಗಿಗಳಿಗೆ ಉಚಿತ ಇಲ್ಲವಾದರೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಬೇಕು. ಚಿಕಿತ್ಸಾ ವೆಚ್ಚ ಭರಿಸಲಾಗದ ಅಸಹಾಯಕ ಬಡ ರೋಗಿಗಳಿದ್ದರೆ ನಮಗೆ ನೇರವಾಗಿ ಸಂಪರ್ಕಿಸಿ ನಮ್ಮ ತಂದೆಯವರ ಹೆಸರಿನಲ್ಲಿ ಪ್ರಾರಂಭಿಸಿರುವ 'ಶ್ರೀ ಲಕ್ಷ್ಮಣ ಸವದಿ ಫೌಂಡೇಶನ್' ವತಿಯಿಂದ ಆರ್ಥಿಕ ನೆರವು ನೀಡಲಾಗುವುದು," ಎಂದು ಅವರು ಭರವಸೆ ನೀಡಿದರು.

ಅಥಣಿಯಲ್ಲಿ ಆರಂಭಗೊಂಡಿರುವ ಕೆಎಂಸಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಅತ್ಯುತ್ತಮ ಸೇವೆ ದೊರಕಲಿ. ಈ ಆಸ್ಪತ್ರೆಯ ವೈದ್ಯರಿಂದ ಗ್ರಾಮೀಣ ಪ್ರದೇಶದ ಬಡ ರೋಗಿಗಳಿಗೆ ಗುಣಮಟ್ಟದ ಸೇವೆಗಳು ದೊರೆಯುವಂತಾಗಲಿ ಎಂದು ಶುಭ ಹಾರೈಸಿದರು.

ದಿವ್ಯ ಸಾನಿಧ್ಯ ವಹಿಸಿದ್ದ ನದಿ ಇಂಗಳಗಾವದ ಸಿದ್ದಲಿಂಗ ಸ್ವಾಮೀಜಿ, ಶೆಟ್ಟರ ಮಠದ ಮರುಳು ಸಿದ್ಧ ಸ್ವಾಮೀಜಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ನಿರ್ಮಾಣದಲ್ಲಿ ಮುಖ್ಯ ಪಾತ್ರ ವಹಿಸಿದ್ದ ಅಭಿಯಂತರರಾದ ರಾಜಶೇಖರ ಟೋಪಗಿ, ಖಲೀಲ ಜಾಲಿಹಾಳ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಪರಪ್ಪ ಸವದಿ, ನಿರ್ದೇಶಕ ಜಿ ಎಂ. ತೇವರಮನಿ, ಶಿವರುದ್ರ ಗೂಳಪ್ಪನವರ, ಸುರೇಶ್ ಮಾಯಣ್ಣವರ, ರಾಜೀವ ನಾಡಗೌಡ, ಎಸ್ ಆರ್ ಮಾಳಿ, ಮುರಿಗೆಪ್ಪ ಕುರೆನ್ನವರ, ಶೋಭಾ ಕುರೆನ್ನವರ, ಡಾ. ರಶ್ಮಿ ಕುರೆನ್ನವರ, ಡಾ. ಪ್ರೀತಿ ಕುರೆನ್ನವರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಎಸ್ ಆರ್ ಮಾಳಿ ಸ್ವಾಗತಿಸಿದರು. ಡಾ. ಸಂಜಯ ಕುರೆನ್ನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಜಯ ಹುದ್ದಾರ ನಿರೂಪಿಸಿದರು. ಡಾ. ವಿಜಯ ಕುರೆನ್ನವರ ವಂದಿಸಿದರು.

# ಮುದ್ದೇಬಿಹಾಳದಲ್ಲಿ ಬಕ್ರೀದ್ ಶಾಂತಿ ಸಭೆ: ಶಾಂತಿ, ಸೌಹಾರ್ದತೆಯಿಂದ ಹಬ್ಬ ಆಚರಿಸಲು ಸಿಪಿಐ ಮಹಮ್ಮದ್ ಫಸಿಯುದ್ದಿನ ಕರೆ.



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಬಕ್ರೀದ್ ಹಬ್ಬವು ತ್ಯಾಗ ಮತ್ತು ಬಲಿದಾನದ ಸಂಕೇತವಾಗಿದೆ. ತಾಲೂಕಿನಾದ್ಯಂತ ಸಾರ್ವಜನಿಕರು ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದಂತೆ ಅತ್ಯಂತ ಶಾಂತಿ ಹಾಗೂ ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸಬೇಕು" ಎಂದು ಮುದ್ದೇಬಿಹಾಳ ವೃತ್ತ ನಿರೀಕ್ಷಕರಾದ (ಸಿಪಿಐ) ಮಹಮ್ಮದ್ ಫಸಿಯುದ್ದಿನ ಅವರು ಕರೆ ನೀಡಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬಕ್ರೀದ್ ಹಬ್ಬದ ಪೂರ್ವಭಾವಿ ಶಾಂತಿ ಪಾಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಕುರಾನ್ ಉಲ್ಲೇಖದ ಹಿನ್ನೆಲೆಯನ್ನು ಸ್ಮರಿಸಿದ ಅವರು, "ಪ್ರವಾದಿ ಇಬ್ರಾಹಿಂ ಅವರಿಗೆ ಕನಸಿನಲ್ಲಿ ದೇವನಿಂದ ಅತ್ಯಂತ ಪವಿತ್ರವಾದ ಜೀವವನ್ನು ಬಲಿ ಕೊಡುವಂತೆ ಸಂದೇಶ ಬಂದಾಗ, ಅವರು ತಮಗೆ ಅತ್ಯಂತ ಪ್ರಿಯನಾದ ಮಗನನ್ನೇ ಬಲಿ ಕೊಡಲು ಮುಂದಾದರು. ಅವರ ಈ ಅಪ್ರತಿಮ ಭಕ್ತಿಗೆ ಮೆಚ್ಚಿದ ದೇವನು, ಮಗನ ಜಾಗದಲ್ಲಿ ಕುರಿಯನ್ನು ಬದಲಾಯಿಸಿ ಬಲಿ ಸ್ವೀಕರಿಸಿದನು. ಅಂದಿನಿಂದ ಈ ದಿನವನ್ನು ಬಕ್ರೀದ್ ಅಥವಾ ತ್ಯಾಗದ ಹಬ್ಬವಾಗಿ ಆಚರಿಸಿಕೊಂಡು ಬರಲಾಗುತ್ತಿದೆ" ಎಂದು ಹಬ್ಬದ ಮಹತ್ವವನ್ನು ವಿವರಿಸಿದರು.

ಇದೇ ಸಂದರ್ಭದಲ್ಲಿ ಅಪರಾಧ ವಿಭಾಗದ ಪಿಎಸ್ಐ ಆರ್.ಎಸ್. ಬಂಗಿ ಮಾತನಾಡಿ, "ಬಕ್ರೀದ್ ಹಬ್ಬವು ಪರಸ್ಪರ ಪ್ರೀತಿ ಹಾಗೂ ತ್ಯಾಗದ ಸಂದೇಶ ಸಾರುತ್ತದೆ. ಸಾರ್ವಜನಿಕರು ಕಾನೂನು ಸುವ್ಯವಸ್ಥೆಗೆ ಧಕ್ಕೆ ಬರದಂತೆ ಸೌಹಾರ್ದಯುತವಾಗಿ ಹಬ್ಬ ಆಚರಿಸಬೇಕು" ಎಂದರು.

ಸಭೆಯಲ್ಲಿ ಪಾಲ್ಗೊಂಡಿದ್ದ ಪ್ರಮುಖ ಮುಖಂಡರಾದ ಹರೀಶ್ ನಾಟಿಕಾರ, ಸದ್ದಾಂ ಕುಂಟೋಜಿ, ರಫೀಕ ಶಿರೋಳ, ಸಿಕಂದರ್ ಜಾನವೇಕರ ಹಾಗೂ ಬಾಬಾ ಪಟೇಲ್ ಅವರು ಮಾತನಾಡಿ, ಬಕ್ರೀದ್ ಹಬ್ಬದ ಆಚರಣೆಯ ಹಿನ್ನೆಲೆಯನ್ನು ಹಂಚಿಕೊಂಡರಲ್ಲದೆ, ಮುದ್ದೇಬಿಹಾಳ ತಾಲೂಕಿನಲ್ಲಿ ಎಂದಿನಂತೆ ಎಲ್ಲಾ ಧರ್ಮದವರು ಒಟ್ಟಾಗಿ, ಶಾಂತಿ-ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪ್ರೊಬೆಷನರಿ ಪಿಎಸ್ಐ ಸತೀಶ, ಪೊಲೀಸ್ ಸಿಬ್ಬಂದಿಗಳಾದ ಹತ್ತರಕಿ, ಪ್ರಕಾಶ ಪೂಜಾರಿ, ರಾಘು ಇಂಗಳಗಿ ಸೇರಿದಂತೆ ಪಟ್ಟಣದ ಪ್ರಮುಖರು ಹಾಗೂ ಮುಸ್ಲಿಂ ಸಮಾಜದ ಹಿರಿಯರು ಉಪಸ್ಥಿತರಿದ್ದರು.

# ಶಾಂತಿ ಹಾಗೂ ಸೌಹಾರ್ದತೆಯಿಂದ ಬಕ್ರಿದ್ ಹಬ್ಬ ಆಚರಿಸಲು ಡಿವೈಎಸ್‌ಪಿ ಕರೆ




**ಬೆಳಗಾವಿ ವಾರ್ತೆ ಕೊಲ್ಹಾರ:** ಪಟ್ಟಣದಲ್ಲಿ ಹಿಂದೂ ಮುಸಲ್ಮಾನ ಸಮಾಜದವರು ಹಬ್ಬದ ಸಂಪ್ರದಾಯದಂತೆ ಬಕ್ರೀದ್ ಹಬ್ಬವನ್ನು ಆಚರಿಸಿ. ಆದರೆ ಅನಗತ್ಯ ವಿಡಿಯೋ, ಫೋಟೋಗಳನ್ನು ಪೇಸ್ಬುಕ್ ಹಾಗೂ ವಾಟ್ಸಪ್ ನಲ್ಲಿ ಶೇರ್ ಮಾಡಬಾರದು. ಮಾಡಿದರೆ ಅಂತವರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು. ಘಟನೆಗಳು ಸಂಭವಿಸದಂತೆ ಎರಡು ಧರ್ಮದ ಹಿರಿಯರು ನೋಡಿಕೊಳ್ಳಬೇಕೆಂದು ಬಸವನ ಬಾಗೇವಾಡಿ ಡಿ ವಾಯ್ ಎಸ್ ಪಿ ಚಂದ್ರಕಾಂತ ನಂದರೆಡ್ಡಿ ಸಲಹೆ ನೀಡಿದರು.

ಪಟ್ಟಣದಲ್ಲಿ ಶನಿವಾರ ಪೊಲಿಸ್ ಠಾಣೆಯಲ್ಲಿ ಜರುಗಿದ ಬಕ್ರಿದ್ ಶಾಂತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಿ ಎಸ್ ಐ ಅಶೋಕ ನಾಯಕ ಮಾತನಾಡಿ, ಅನ್ಯ ಧರ್ಮದವರಿಗೆ ತೊಂದರೆ ಆಗದ ರೀತಿಯಲ್ಲಿ ಮುಸಲ್ಮಾನ ಬಂಧುಗಳು ಬಕ್ರಿದ ಹಬ್ಬವನ್ನು ಆಚರಿಸಬೇಕು. ಬಕ್ರಿದ ಹಬ್ಬದ ವೇಳೆ ಬೇರೆ ಧರ್ಮದವರಿಗೆ ಹಬ್ಬದ ಸಂಕೇತವಾಗಿ ಹಸಿಮಾಂಸವನ್ನು ಹಂಚುವ ಸಂದರ್ಭದಲ್ಲಿ ಇನ್ನೊಬ್ಬರಿಗೆ ತೊಂದರೆ ಆಗದಂತೆ ಹಂಚಬೇಕು. ಇತ್ತೀಚಿನ ದಿನಗಳಲ್ಲಿ ಬೇರೆ ಧರ್ಮಕ್ಕೆ ಅವಹೇಳನಕಾರಿ ಆಗುವಂತ ಪೊ?ಸ್ಟರ್ ಗಳನ್ನ ಹರಿಬಿಡುವ ಮೂಲಕ ಅನ್ಯ ಕೋಮಿನ ಜನರ ಮನಸ್ಸಿಗೆ ಘಾಸಿಯಾಗುವ ರೀತಿ ನಡೆದುಕೊಳ್ಳಲಾಗುತ್ತಿದೆ. ಆದರೆ ಆ ರೀತಿ ಆಗದಂತೆ ಹಿಂದೂ ಮುಸ್ಲಿಂ ಸಮಾಜದ ಹಿರಿಯರು ತಮ್ಮ ಯುವಕರಿಗೆ ತಿಳಿಸಿ ಹೇಳಬೇಕು ಎಂದರು.

ಈ ವೇಳೆ ಮುಖಂಡ ಟಿ ಟಿ ಹಗೇದಾಳ ಮಾತನಾಡಿ, ತ್ಯಾಗ, ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಪಟ್ಟಣದಲ್ಲಿ ಮುಸ್ಲಿಂ ಸಮಾಜದವರು ಶಾಂತಿಯಿಂದ ಹಾಗು ಸಂಭ್ರಮದಿಂದ ಆಚರಣೆ ಮಾಡುತ್ತಾರೆ, ಆದರೆ ಅವರಿಗೆ ನಾವೆಲ್ಲ ಹಿಂದೂಗಳು ಸಹಕಾರ ಕೊಡುತ್ತೇವೆ. ಯಾವುದೇ ರೀತಿ ಗಲಾಟೆ ಆಗಲು ಅವಕಾಶ ಕೊಡುವುದಿಲ್ಲ ಎಂದರು.

ಪೊಲೀಸ್ ಠಾಣೆಯಲ್ಲಿ ಹಬ್ಬದ ಶಾಂತಿ ಸಭೆ ಮಾಡಲು ಸಭಾ ಭವನದ ಕೊರತೆಯಿದೆ. ಕೊಲ್ಹಾರ ತಾಲೂಕು ಕೇಂದ್ರವಾದ ಕಾರಣ ದೊಡ್ಡ ಪೊಲೀಸ್ ಠಾಣೆ ನಿರ್ಮಾಣವಾಗಬೇಕು ಈ ದಿಶೆಯಲ್ಲಿ ಕಾಂಗ್ರೇಸ್ ಪಕ್ಷದ ಮುಖಂಡರು ಪ್ರಯತ್ನಿಸಿ ಈ ಅವಧಿಯಲಿ ಮಾಡಿಸಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಮುಸ್ಲಿಂ ಸಮಾಜದ ಮುಖಂಡರಾದ ಉಸ್ಮಾನ ಪಟೇಲ್ ಖಾನ್ನವರ , ಅಂಜುಮನ್ ಕಮಿಟಿ ಮಾಜಿ ಅಧ್ಯಕ್ಷ ಅಲ್ಲಭಾಕ್ಷ ಬಿಜಾಪುರ, ದಲಿತ ಮುಖಂಡ ದಶರಥ ಈಟಿ ಮಾತನಾಡಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್ ಬಿ ಪಕಾಲಿ, ಪಟ್ಟಣ ಪಂಚಾಯತಿ ಸದಸ್ಯರಾದ ಬಾಬು ಭಜಂತ್ರಿ,ಎಂ ಆರ್ ಕಲಾದಗಿ, ಮುಖಂಡ ಗುರುನಗೌಡ ಬಿರಾದಾರ, ಡೊಂಗ್ರಿ ಕಟಬರ, ಸುರೇಶ ಗಿಡ್ಡಪ್ಪಗೊಳ , ವಿಠ್ಠಲ ಅಸಂಗಿ, ಸೇರಿದಂತೆ ಇತರರು ಇದ್ದರು.

# ಬ್ಯಾಡ್ಮಿಂಟನ್ ಲೋಕದಲ್ಲಿ ವಿಹರಿಸಿದ ಗುಮ್ಮಟನಗರಿ ಜನತೆ

**ಬೆಳಗಾವಿ ವಾರ್ತೆ ವಿಜಯಪುರ:** ಐತಿಹಾಸಿಕ ಗುಮ್ಮಟ ನಗರಿಯಲ್ಲಿ ಮೇ 17 ರಿಂದ 7 ದಿನಗಳ ಕಾಲ ನಡೆದ ಕರ್ನಾಟಕ ರಾಜ್ಯ ಸಬ್ ಜೂನಿಯರ್ ರ್ಯಾಂಕಿಂಗ್ ಬ್ಯಾಡ್ಮಿಂ ಟನ್ ಟೂರ್ನಮೆಂಟ್ 2026 ಪಂದ್ಯಾ ವಳಿಗೆ ಶನಿವಾರ ವಿದ್ಯುಕ್ತವಾಗಿ ತೆರೆಬಿತ್ತು.




ಇದೇ ಮೊದಲ ಬಾರಿಗೆ ನಡೆದ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಕ್ರೀಡಾಕೂಟ ಗುಮ್ಮಟ ನಗರಿಯ ಜನತೆಯನ್ನು ಕಳೆದ 7 ದಿನಗಳಿಂದ ಬ್ಯಾಡ್ಮಿಂಟನ್ ಲೋಕದಲ್ಲಿ ಮಿಂದೇಳಿಸಿತು.ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಶನ್ ನ ಅಧಿಕೃತ ಮಾನ್ಯತೆಯೊಂದಿಗೆ ಯೊನೆಕ್ಸ್ ಸನ್ ರೈಸ್ ಪ್ರಾಯೋಕತ್ವದಡಿ ನಗರದ ಬಿಎಲ್ ಡಿ ಸಂಸ್ಥೆ ಹಾಗೂ ಜಿಲ್ಲಾಡಳಿತದ ಸಹಕಾರದಲ್ಲಿ ಈ ಪಂದ್ಯಾಟ ನಡೆದಿದ್ದರಿಂದ ಯಶಸ್ವಿಯಾಗುವುದರ ಮೂಲಕ ಜಿಲ್ಲೆಯ ಇತಿಹಾಸ ಪುಟಗಳಲ್ಲಿ ದಾಖಲೆಯನ್ನು ಬರೆಯಿತು. ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲ ಹಾಗೂ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಜಿಲ್ಲೆಯ ಶಾಸಕರು ಹಾಗೂ ಜನಪ್ರತಿನಿಧಿಗಳು ಜಿಲ್ಲೆಯಲ್ಲಿ ಬ್ಯಾಡ್ಮಿಂಟನ್ ಆಟ ಪ್ರಸಿದ್ಧಿ ಪಡೆದು ಯುವಕರು ಪ್ರೇರಣೆ ಹೊಂದುವಂತಾಗಲಿ ಎಂಬ ಸದಾಶಯದಂತೆ ಜಿಲ್ಲೆ ಆ ನಿಟ್ಟಿನಲ್ಲೂ ಆಯೋಜಿಸುವ ಕ್ರೀಡೆಗಳಿಗೆ ಆತಿಥ್ಯ ವಹಿಸಿಕೊಂಡು ಬ್ಯಾಡ್ಮಿಂಟನ್ ಆಟದತ್ತ ರಾಜ್ಯ ಹಾಗು ಜಿಲ್ಲೆಯ ಜನತೆಯ ಗಮನಸೆಳೆಯಿತು.

ನಗರದ ಡಾ.ಬಿ. ಆರ್. ಅಂಬೇಡ್ಕರ್ ಒಳಾಂಗಣ ಹಾಗೂ ಬಿಎಲ್‌ಡಿಇ ಸಂಸ್ಥೆಯ ಒಳಾಂಗಣದಲ್ಲಿ ನಡೆದ ಬ್ಯಾಡ್ಮಿಂಟನ್ ಆಟಗಳು ನಗರದ ಬ್ಯಾಡ್ಮಿಂಟನ್ ಪ್ರೇಮಿಗಳನ್ನು ಬ್ಯಾಡ್ಮಿಂಟನ್ ಆಟದತ್ತ ಪ್ರೇರೆಪಿಸಿತು.ಬ್ಯಾಡ್ಮಿಂಟನ್ ಟೂರ್ನಮೆಂಟ್ 2026 ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಇಲ್ಲಿನ ಜನತೆ ನೀಡಿದ ಆತಿಥ್ಯ ನಮಗೆ ಸಂಪೂರ್ಣ ಸಂತೋಷವಾಗಿದೆ ರಾಜ್ಯದ ವಿವಿಧ ಕಡೆಯಿಂದ ಬಂದಿದ್ದ ಬ್ಯಾಡ್ಮಿಂಟನ್ ಆಟಗಾರರು ತಿಳಿಸಿದರು. ಮಾತ್ರವಲ್ಲ, ಈ ಟೂರ್ನಮೆಂಟ್ ಆಟಗಾರರು, ಅಧಿಕಾರಿಗಳು ಹಾಗೂ ಬ್ಯಾಡ್ಮಿಂಟನ್ ಅಭಿಮಾನಿಗಳಿಂದ ಉತ್ತಮ ಪ್ರತಿಕ್ರಿಯೆ ಬಂತು ಎಂದು ಸಂತಸ ಹಂಚಿಕೊಂಡರು. ಕಳೆದ 7 ದಿನಗಳಲ್ಲಿ ಸುಮಾರು 760 ಆಟಗಾರರ ಎಂಟ್ರಿಗಳು ದಾಖಲಾಗಿದ್ದು, 750ಕ್ಕೂ ಹೆಚ್ಚು ಪಂದ್ಯಗಳು ಯಶಸ್ವಿಯಾಗಿ ನಡೆದಿವೆ. ಟೂರ್ನಮೆಂಟ್ ಅವಧಿಯಲ್ಲಿ ಸುಮಾರು 200 ಶಟಲ್ ಬಾಟಲಗಳು (2400ಕ್ಕೂ ಹೆಚ್ಚು ಶಟಲ್‌ಗಳು) ಬಳಸಲ್ಪಟ್ಟಿದ್ದು, ಸ್ಪರ್ಧೆಯ ವ್ಯಾಪ್ತಿ ಮತ್ತು ಮಟ್ಟವನ್ನು ತೋರಿಸುತ್ತದೆ. ಈ ಪಂದ್ಯಾವಳಿಯನ್ನು 3000ಕ್ಕೂ ಹೆಚ್ಚು ಸದಸ್ಯರು ಹಾಗೂ ಪ್ರೇಕ್ಷಕರು ವೀಕ್ಷಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ್ದಾರೆ.ಈ ಟೂರ್ನಮೆಂಟ್ ಹೊಸ ಪ್ರತಿಭಾವಂತ ಆಟಗಾರರನ್ನು ಗುರುತಿಸಿ ಉತ್ತೇಜಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ. ವಿಶೇಷವಾಗಿ ವಿಜಯಪುರದಿಂದ 10ಕ್ಕೂ ಹೆಚ್ಚು ಆಟಗಾರರು ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದ್ದಾರೆ.ಈ ಯಶಸ್ವಿ ಆಯೋಜನೆಯ ಮೂಲಕ ಕರ್ನಾಟಕವು ದೊಡ್ಡ ಮಟ್ಟದ ಬ್ಯಾಡ್ಮಿಂಟನ್ ಟೂರ್ನಮೆಂಟ್‌ಗಳನ್ನು ಆಯೋಜಿಸುವ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ನಿಮ್ಮ ಸಕಾರಾತ್ಮಕ ಪ್ರತಿಕ್ರಿಯೆ ಮತ್ತು ಸಹಕಾರವನ್ನು ನಿರೀಕ್ಷಿಸುತ್ತೇವೆ ಎಂದು ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಶನ್ ಅಧ್ಯಕ್ಷರಾದ ಕುಮಾರ ಬಂಗಾರಪ್ಪ ಅವರು ತಿಳಿಸಿದರು.

# ಮಕ್ಕಳ ಸಮಗ್ರ ಬೆಳವಣಿಗೆಗೆ ಕೈಜೋಡಿಸಿ




**ಬೆಳಗಾವಿ ವಾರ್ತೆ ವಿಜಯಪುರ:** ಮಕ್ಕಳ ಸಮಗ್ರ ಬೆಳವಣಿಗೆಯಲ್ಲಿ ಅಂಗನವಾಡಿ ಕೇಂದ್ರಗಳು ಮಹತ್ವದ ಪಾತ್ರವಹಿಸುತ್ತಿವೆ ಎಂದು ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಅಜೀಂ ಪ್ರೇಮ್ ಜೀ ಫೌಂಡೇಷನ್ ಸಹಯೋಗದಲ್ಲಿ ನಗರದ ಕಂದಗಲ್ ಹನುಮತರಾಯ ರಂಗಮಂದಿರದಲ್ಲಿ ಹೊಸದಾಗಿ ನೇಮಕವಾದ ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರಿಗೆ ಮೇ.21ರಂದು ಹಮ್ಮಿಕೊಂಡಿದ್ದ ಬುನಾದಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಆರೋಗ್ಯ,ಶಿಕ್ಷಣ ಮತ್ತು ಉತ್ತಮ ಸಂಸ್ಕಾರಗಳ ಬುನಾದಿ ಬಾಲ್ಯಾವಸ್ಥೆಯಲ್ಲೇ ನಿರ್ಮಾಣವಾಗುತ್ತದೆ. ಹಾಗಾಗಿ ಅಂಗನವಾಡಿ ಶಿಕ್ಷಕಿಯರು ಹಾಗೂ ಸಹಾಯಕಿಯರು ತಮ್ಮ ಜವಾಬ್ದಾರಿಯನ್ನು ನಿಷ್ಠೆಯಿಂದ ನಿರ್ವಹಿಸಬೇಕು ಎಂದರು.

ಇನ್ನೊಂದೆಡೆ ಸರ್ಕಾರ ಮಕ್ಕಳ ಹಾಗೂ ಮಹಿಳೆಯರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ. ಅಂಗನವಾಡಿ ಶಿಕ್ಷಕಿಯರು ಅಂಗನವಾಡಿ ಕೇಂದ್ರಕ್ಕೆ ಮಾತ್ರ ಸೀಮಿತವಾಗದೆ ಗ್ರಾಮ ಮತ್ತು ಸಮುದಾಯ ಮಟ್ಟದಲ್ಲಿಯೂ ಜನರಿಗೆ ಈ ಯೋಜನೆಗಳ ಮಾಹಿತಿ ತಲುಪಿಸಿ, ಅವುಗಳ ಸದುಪಯೋಗ ಪಡೆಯಲು ಪ್ರೇರಣೆ ನೀಡಬೇಕು ಎಂದರು.

ಕಾರ್ಯಕ್ರಮದ ಹೊಸದಾಗಿ ನೇಮಕವಾದ ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರಿಗೆ ಮಕ್ಕಳ ಆರೈಕೆ, ಪೌಷ್ಟಿಕ ಆಹಾರ, ಶಿಕ್ಷಣ ಚಟುವಟಿಕೆಗಳು ಹಾಗೂ ಆರೋಗ್ಯ ಸಂಬಂಧಿತ ವಿವಿಧ ತರಬೇತಿ ಅಧಿವೇಶನಗಳನ್ನು ನಡೆಸಲಾಯಿತು. ಪ್ರಾಯೋಗಿಕ ಚಟುವಟಿಕೆಗಳ ಮೂಲಕ ಕ್ಷೇತ್ರಮಟ್ಟದ ಅನುಭವಗಳನ್ನೂ ಹಂಚಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಕೆ. ಚವ್ಹಾಣ, ಕಾರ್ಯಕ್ರಮಾಧಿಕಾರಿ ನಿರ್ಮಲಾ ಸುರಪುರ, ದೀಪಾಕ್ಷಿ, ಜಾನಕಿ, ಫೌಂಡೇಶನ್ ಜಿಲ್ಲಾ ಸಂಯೋಜಕ ಹರೀಶ ಕೆ.ಆರ್., ಅಂಗನವಾಡಿ ಶಿಕ್ಷಕಿಯರು, ಸಹಾಯಕಿಯರು ಹಾಗೂ ಅಜೀಂ ಪ್ರೇಮಜಿ ಫೌಂಡೇಶನ್ ಸದಸ್ಯರು ಭಾಗವಹಿಸಿದ್ದರು.

# ರೂ.95 ಲಕ್ಷ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಯತ್ನಾಳ ಭೂಮಿಪೂಜೆ

**ಬೆಳಗಾವಿ ವಾರ್ತೆ ವಿಜಯಪುರ:** ನಗರದಲ್ಲಿ ಧಾರ್ಮಿಕ ದತ್ತಿ ಇಲಾಖೆ, ಮಾನ್ಯ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ.95 ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಬಸನಗೌಡ ಪಾಟೀಲ ಯತ್ನಾಳ ರವರು ಶುಕ್ರವಾರ ಭೂಮಿಪೂಜೆ ನೆರವೇರಿಸಿದರು.

ಜಯಪುರ ನಗರದ ವಾರ್ಡ್ ನಂ.2 ರಲ್ಲಿ ಬರುವ ಶಿವಬಸಪ್ಪ ಗದ್ದುಗೆ ದೇವಸ್ಥಾನದ ಹತ್ತಿರ ಧಾರ್ಮಿಕ ದತ್ತಿ ಇಲಾಖೆಯಿಂದ ಮಂಜೂರಿಸಲಾದ ರೂ.10 ಲಕ್ಷ ಮೊತ್ತದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ, ವೀರಭದ್ರೇಶ್ವರ ದೇವಸ್ಥಾನದ ಹತ್ತಿರ ಧಾರ್ಮಿಕ ದತ್ತಿ ಇಲಾಖೆಯಿಂದ ಮಂಜೂರಿಸಲಾದ ರೂ.15 ಲಕ್ಷ ಮೊತ್ತದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಹಾಗೂ ದರ್ಗಾದ ಕರಿಸಿದ್ದೇಶ್ವರ ದೇವಸ್ಥಾನ ಹತ್ತಿರ ಸನ್ 2025-26ನೇ ಸಾಲಿನ ಮಾನ್ಯ ಮುಖ್ಯಮಂತ್ರಿಯವರ ಮೂಲಸೌಕರ್ಯ



ಅಭಿವೃದ್ಧಿ ಯೋಜನೆಯಡಿ ಮತ್ತು ಧಾರ್ಮಿಕ ದತ್ತಿ ಇಲಾಖೆಯಿಂದ ಮಂಜೂರಿಸಲಾದ ರೂ.70 ಲಕ್ಷ ಅನುದಾನದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಪ್ರತಿ ಭೂಮಿಪೂಜೆ ಬಳಿಕೆ ಸಾರ್ವಜನಿಕರ ಅಹವಾಲು ಆಲಿಸಿದರು. ಮೇಯರ್ ಎಂ.ಎಸ್.ಕರಡಿ, ಹಾಲುಮತ ಸಮಾಜದ ಅಧ್ಯಕ್ಷ ಮಲ್ಲು ಯಾದವಾಡ, ಸದಸ್ಯರಾದ ರಾಜಶೇಖರ ಕುರಿಯವರ, ಮುಖಂಡರಾದ ಭೀಮನಗೌಡ ಪಾಟೀಲ, ಸಾಯಬಣ್ಣ ಭೋವಿ, ಶಂಕರ ಬಾಲದಂಡಿ, ಈರಣ್ಣ ವಾಡೆದ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಬ್ರಿಲಿಯಂಟ್ ಶಿಕ್ಷಣ ಸಂಸ್ಥೆಯ ಸಾಧನೆ ರಾಜ್ಯಕ್ಕೆ ಮಾದರಿ: ಶಾಸಕ ರಾಜುಗೌಡ

**ಬೆಳಗಾವಿ ವಾರ್ತೆ ತಾಳಿಕೋಟೆ :** ಪುಟ್ಟ ಮೈಲೇಶ್ವರ ಗ್ರಾಮದಲ್ಲಿ ಹುಟ್ಟಿ ರಾಜ್ಯಮಟ್ಟದಲ್ಲಿ ಸಾಧನೆಯ ಹೆಜ್ಜೆಯನ್ನು ಇಡುತ್ತಾ ಸಾಗಿರುವ ಬ್ರಿಲಿಯಂಟ್ ಶಿಕ್ಷಣ ಸಂಸ್ಥೆಯ ಕಾರ್ಯ ಮೆಚ್ಚುವಂತಹದ್ದಾಗಿದೆ ಗ್ರಾಮೀಣ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳನ್ನು ರಾಜ್ಯಕ್ಕೆ ಪರಿಚಯಿಸುತ್ತಾ ಸಾಗಿರುವದು ಹೆಮ್ಮೆಯ ಸಂಗತಿ ಎಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ ಹೇಳಿದರು.



ತಾಲೂಕಿನ ಮೈಲೇಶ್ವರ ಗ್ರಾಮದ ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಬ್ರಿಲಿಯಂಟ್ ಆಂಗ್ಲ ಮಾಧ್ಯಮ ಪ್ರೌಢಶಾಲೆ ವಿದ್ಯಾರ್ಥಿನಿ ಗಂಗಾ ಅಶೋಕ ಕೋಳೂರ ಎಸ್‌ಎಸ್‌ಎಲ್‌ಸಿ ಪರಿಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಹಿನ್ನೆಲೆಯಲ್ಲಿ ಅವರು ತಮ್ಮ ವತಿಯಿಂದ ಶುಕ್ರವಾರರಂದು ಆಯೋಜಿಸಿದ ಸನ್ಮಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿ ಗಂಗಾ ಕೋಳೂರಗೆ ಸನ್ಮಾನಿಸಿ ಪ್ರೋತ್ಸಾಹಿಸಿ ಮಾತನಾಡುತ್ತಿದ್ದ ಅವರು ಈ ಬ್ರಿಲಿಯಂಟ್ ಶಿಕ್ಷಣ ಸಂಸ್ಥೆಯಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆಯಾಗುತ್ತಿದ್ದು ಇದೀಗ ಗಂಗಾ ವಿದ್ಯಾರ್ಥಿನಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ನನ್ನ ದೇವರಹಿಪ್ಪರಗಿ ಮತಕ್ಷೇತ್ರದ ಕೀರ್ತಿಯನ್ನು ಹೆಚ್ಚಿಸಿದ್ದಾಳೆ ಪ್ರತಿಭಾವಂತ ವಿದ್ಯಾರ್ಥಿಗಳನ್ನಾಗಿ ರೂಪಿಸುವಲ್ಲಿ ಮುಂದು ವರೆದ ಈ ಬ್ರಿಲಿಯಂಟ ಶಿಕ್ಷಣ ಸಂಸ್ಥೆಯ ಕಾರ್ಯ ಮೆಚ್ಚುವಂತಹದ್ದಾಗಿದೆ ಈ ವಿದ್ಯಾರ್ಥಿಇಯ ಸಾಧನೆಗೆ ಶಿಕ್ಷಕರ ಪರಿಶ್ರಮ ಸಂಸ್ಥೆಯ ಪರಿಶ್ರಮ ಮತ್ತು ಪಾಲಕರ ಸಹಕಾರಕ್ಕೆ ಅಭಿನಂದಿಸುತ್ತೇನೆಂದ ಅವರು ವಿದ್ಯಾರ್ಥಿಗಳು ಶಿಕ್ಷಕರು ನೀಡುವ ಪಾಠ ಭೋದನೆಗಳನ್ನು ಮನದಟ್ಟು ಮಾಡಿಕೊಳ್ಳುವ ರೀತಿ ಗಂಗಾ ಕೊಳೂರ ವಿದ್ಯಾರ್ಥಿನಿಯನ್ನು ನೋಡಿ ಕಲಿತಕೊಳ್ಳಬೇಕು ವಿದ್ಯಾರ್ಥಿಗಳು ಕಠಿಣ ಪರಿಶ್ರಮದಿಂದ ಎಂಥಹ ಸಾಧನೆಯನ್ನಾದರೂ ಮಾಡಬಹುದು ಎಂಬುದಕ್ಕೆ ಈ ವಿದ್ಯಾರ್ಥಿನಿಯೇ ಉತ್ತಮ ಉಧಾಹರಣೆಯಾಗಿದ್ದಾಳೆ, ಅವಳ ಈ ಸಾಧನೆ ಎಲ್ಲ ವಿದ್ಯಾರ್ಥಿಗಳಿಗೂ ಮಾದರಿಯಾಗಿದೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಒಳ್ಳೆಯ ಸಂಸ್ಕಾರಗಳನ್ನು ನೀಡುವ ಕೆಲಸ ಶಿಕ್ಷಣ ಸಂಸ್ಥೆಗಳಿಂದ ಆಗಬೇಕು. ಮುಂದಿನ ದಿನಗಳಲ್ಲಿ ಈ ಬ್ರಿಲಿಯಂಟ ಶಿಕ್ಷಣ ಸಂಸ್ಥೆಗೆ ನಾನು ಎಲ್ಲ ರೀತಿಯ ಸಹಕಾರವನ್ನು ನೀಡುತ್ತೇನೆ ಎಂದರು.

ಪ್ರಾಸ್ತಾವಿಕವಾಗಿ ಜೆಡಿಎಸ್ ತಾಲೂಕಾ ಅಧಕ್ಷ ಮಡುಸಾಹುಕಾರ ಬಿರಾದಾರ ಅವರು ಮಾತನಾಡಿ ಶಾಸಕ ರಾಜುಗೌಡ ಪಾಟೀಲ ಅವರು ಶಿಕ್ಷಣ ಹಾಗೂ ಕೃಷಿಗೆ ಹೆಚ್ಚು ಒತ್ತು ನೀಡಿ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ, ವಿದ್ಯಾರ್ಥಿನಿ ಗಂಗಾ ಕೋಳೂರ ಅವರ ಈ ಸಾಧನೆ ಶಾಸಕರಿಗೆ ಇನ್ನಷ್ಟು ಹುಮ್ಮಸ್ಸು ತಂದು ಕೊಟ್ಟಿದೆ. ಸಾಧನೆ ಎಂಬುದು ಯಾರ ಸ್ವತ್ತು ಅಲ್ಲ ಅದು ಶಿಕ್ಷಣ ಸಂಸ್ಥೆಯಲ್ಲಿ ನೀಡುವ ಪಾಠ ಭೋದನೆಯ ನಿತ್ಯ ಮರು ಅಧ್ಯಯನ ಮಾಡುವವದರೊಂದಿಗೆ ಮುನ್ನುಗುತ್ತಾರೋ ಸಾಧನೆ ಅವರನ್ನು ಹುಡುಕಿಕೊಂಡು ಬರಲಿದೆ ಅಂತಹ ಒಳ್ಳೆಯ ಪಾಠ ಭೋದನೆಯ ಮೂಲಕ ಈ ಭಾಗದಲ್ಲಿಯೇ ಹೆಸರುವಾಸಿಯಾಗಿರುವ ಬ್ರಿಲಿಯಂಟ್ ಶಿಕ್ಷಣ ಸಂಸ್ಥೆ ರಾಜ್ಯದಲ್ಲಿಯೇ ಮಾದರಿಯ ಶಿಕ್ಷಣ ಸಂಸ್ಥೆಯಾಗಿ ಹೊರಹೊಮ್ಮಿದೆ ವಿದ್ಯಾರ್ಥಿಗಳು ಯಾವುದೇ ವ್ಯಸನಗಳಿಗೆ ಬಲಿ ಯಾಗದೇ ತಮ್ಮ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದರು.

ಮಾರುತಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಂ.ಬಿ. ಮಡಿವಾಳರ ಅವರು ಮಾತನಾಡಿ ಶಾಸಕ ರಾಜುಗೌಡ ಪಾಟೀಲ ಅವರು ನಮ್ಮ ಸಂಸ್ಥೆಗೆ ಆಗಮಿಸಿ ವಿದ್ಯಾರ್ಥಿನಿ ಕೋಳೂರ ಅವರಿಗೆ ಗೌರವಿಸಿರುವದು ಅವರಿಗೆ ಶಿಕ್ಷಣದ ಕುರಿತು ಇರುವ ಕಾಳಜಿಯನ್ನು ಎತ್ತಿ ತೋರಿಸುತ್ತದೆ. ಅವರೊಬ್ಬ ಹೃದಯ ಶ್ರೀಮಂತಿಕೆಯನ್ನು ಹೊಂದಿದ ಸರಳ ಸಜ್ಜನ ರಾಜಕಾರಣಿ ಸದಾ ಜನಸಾಮಾನ್ಯರೊಂದಿಗೆ ಇರುವ ವ್ಯಕ್ತಿ ಅವರ ಮಾರ್ಗದರ್ಶನ ನಮಗೆ ಅಗತ್ಯವಾಗಿದೆ ಅವರ ಈ ಕಾರ್ಯ ನಮಗೆಲ್ಲರಿಗೂ ಸ್ಪೂರ್ತಿ ತಂದು ಕೊಟ್ಟಿದೆ ಎಂದರು.

ಇದೇ ಸಂದರ್ಭದಲ್ಲಿ ಶಾಸಕ ರಾಜುಗೌಡ ಪಾಟೀಲ ಇವರಿಗೆ ಸಂಸ್ಥೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ.ನಡುವಿನಮನಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಮಯದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಆರ್ ಬಿ ನಡುವಿನಮನಿ, ತಾಪಂ ಮಾಜಿ ಅಧ್ಯಕ್ಷ ರಾಜುಗೌಡ ಕೋಳೂರ, ವೀರೇಶಗೌಡ ಪಾಟೀಲ, ಉಮೇಶ ಮೈಲೇಶ್ವರ, ಅಪು ಕುಳಗೇರಿ, ಪಿಡಿಒ ಪ್ರಭು ಚೆನ್ನೂರ, ಸಂಸ್ಥೆಯ ನಿರ್ದೇಶಕರಾದ ಎಸ್.ಎಚ್.ಪಾಟೀಲ, ಶ್ರೀಮತಿ ಲೀಲಾದೇವಿ ಎಂ. ಬಿರಾದಾರ, ಶ್ರೀಮತಿ ನಿರ್ಮಲಾ ಎಸ್ ಗಡಗಿ, ಡಾ.ಶಶಿಧರ ಬಿರಾದಾರ, ಕನ್ನಡ ಮಾಧ್ಯಮ ಮುಖ್ಯೋಪಾಧ್ಯಾಯ ಡಾ.ವಿನಾಯಕ ಪಟಗಾರ, ಆಂಗ್ಲ ಮಾಧ್ಯಮ ಮುಖ್ಯೋಪಾಧ್ಯಾಯ ಬಿ.ಜಿ.ಕರಕಳ್ಳಿ, ಶಿಕ್ಷಕ ವರ್ಗ, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.

# ಭಾವೈಕ್ಯದಿಂದ ಬಕ್ರೀದ್ ಹಬ್ಬ ಆಚರಿಸಿ : ಸಿಪಿಐ ಆರ್.ಹೆಚ್.ದೊಡ್ಡಮನಿ




**ಬೆಳಗಾವಿ ವಾರ್ತೆ ಗಂಗಾವತಿ:** ಸಮೀಪದ ಬಸಾಪಟ್ಟಣ ಗ್ರಾಮದಲ್ಲಿ ಹಿಂದೂ-ಮುಸ್ಲಿಂ ಪ್ರತಿ ಹಬ್ಬವನ್ನು ಭಾವೈಕ್ಯದಿಂದ ಆಚರಿಸುತ್ತಿದ್ದು, ಇದನ್ನು ಮುಂದುವರಿಸಿಕೊಂಡು ಹೋಗಬೇಕೆಂದು ಗಂಗಾವತಿ ಗ್ರಾಮೀಣ ಠಾಣೆ ಸಿಪಿಐ ರಂಗಪ್ಪ ಹೆಚ್.ದೊಡ್ಡಮನಿ ಹೇಳಿದರು.

ಬಸಾಪಟ್ಟಣ ಗ್ರಾಮದಲ್ಲಿ ಬಕ್ರೀದ್ ನಿಮಿತ್ತ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದರು. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ಸುಳ್ಳು ಸುದ್ದಿಗಳಿಗೆ ಯಾರೂ ಕಿವಿಗೊಡದೆ ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಶ್ರದ್ಧೆಯಿಂದ ಆಚರಿಸಬೇಕು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆಗೆ ಸಮಾಜದವರು ಸಹಕರಿಸಬೇಕು ಎಂದು ಕೋರಿದರು.

ಈ ಸಂದರ್ಭದಲ್ಲಿ ಶ್ರೀ ಸಿದ್ರಾಮಯ್ಯ ಗುರುವಿನ,ಸಿದ್ದಯ್ಯ ಗುರುವಿನ, ದಳಪತಿ ಮಹ್ಮದ್ ಸಾಬ , ಗ್ರಾಮದ ಮುಖಂಡರಾದ ಸಣ್ಣಕ್ಕಿ ನೀಲಪ್ಪ, ಕೆ.ಮೈಬುಸಾಬ,ಆಂಜನೇಯ ನಾಯಕ್,ದ್ಯಾಮಣ್ಣ ಅಂಗಡಿ,ಎಸ್.ರಾಮಕೃಷ್ಣ, ಸೇರಿದಂತೆ ಇತರರು ಇದ್ದರು.

# ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕೊಪ್ಪಳ ತಾಲೂಕು ಅಧ್ಯಕ್ಷರಾಗಿ ಬಾಳಪ್ಪ ಕಾಳೆ, ಪ್ರಧಾನ ಕಾರ್ಯದರ್ಶಿಯಾಗಿ ಮಹೇಶ್ ಟಂಕಸಾಲೆ



**ಬೆಳಗಾವಿ ವಾರ್ತೆ ಕೊಪ್ಪಳ :** ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕ ಘಟಕ ಕೊಪ್ಪಳ 2026-2031 ರ ಅವಧಿಗೆ ನೂತನ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ನೂತನ ಅಧ್ಯಕ್ಷರಾಗಿ ಬಾಳಪ್ಪ ಕಾಳೆ, ಉಪಾಧ್ಯಕ್ಷರಾಗಿ ರಮೇಶ ಬುಡ್ಡನಗೌಡ್ರ, ಪ್ರಧಾನ ಕಾರ್ಯದರ್ಶಿಯಾಗಿ ಮಹೇಶ ಟಂಕಸಾಲಿ, ಮಹಿಳಾ ಉಪಾಧ್ಯಕ್ಷರಾಗಿ ಮಂಜುಳಾ ಶ್ಯಾವಿ, ಕೋಶ್ಯಾಧ್ಯಕ್ಷರಾಗಿ ನಫೀಸಾಖಾನ್ ಪಠಾನ್, ಸಹ ಕಾರ್ಯದರ್ಶಿಯಾಗಿ ದೇವಪ್ಪ ಒಂಟಿಗಾರ, ಮಹಿಳಾ ಸಹ ಕಾರ್ಯದರ್ಶಿಯಾಗಿ ಪೂರ್ಣಿಮಾ ತುಪ್ಪದ, ಸಂಘಟನಾ ಕಾರ್ಯದರ್ಶಿಯಾಗಿ ಗುರುಸ್ವಾಮಿ ಆರ್, ಮಹಿಳಾ ಸಂಘಟನಾ ಕಾರ್ಯದರ್ಶಿಯಾಗಿ ಪೂರ್ಣಿಮಾ ಪಟ್ಟಣಶೆಟ್ಟಿ ಅವರು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಕೊಪ್ಪಳ ತಾಲೂಕಿನ ನೂತನ ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಲು ರಾಜ್ಯ ಘಟಕದ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಕೊಪ್ಪಳ ತಾಲೂಕಿನ ನೂತನ ಕಾರ್ಯಕಾರಿ ಸಮಿತಿ ಸದಸ್ಯರಿಗೆ ಮತ್ತು ಕೊಪ್ಪಳ ತಾಲೂಕಿನ ಸರ್ವ ಮುಖ್ಯೋಪಾಧ್ಯಾಯರು ಮತ್ತು ಗುರುಗಳು-ಗುರುಮಾತೆಯರಿಗೆ ಅಭಿನಂದಿಸುವುದಾಗಿ ತಿಳಿಸಿದ್ದಾರೆ.

**ಹರ್ಷ:** ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಬಾಳಪ್ಪ ಕಾಳೆ, ಪ್ರಧಾನ ಕಾರ್ಯದರ್ಶಿಯಾಗಿ ಮಹೇಶ್ ಟಂಕಸಾಲೆ ಸೇರಿದಂತೆ ನೂತನ ಪದಾಧಿಕಾರಿಗಳು ಆಯ್ಕೆಗೊಂಡಿದ್ದು ಶಿಕ್ಷಕರ ವೃಂದ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದೆ.

# ಬಕ್ರಿದ್ ವೇಳೆ ಅನಧೀಕೃತ ಜಾನುವಾರುಗಳ ವಧೆ, ಸಾಗಣೆಗೆ ಅವಕಾಶವಿಲ್ಲ: ಜಿಲ್ಲಾಧಿಕಾರಿ ಡಾ. ಸುರೇಶ ಬಿ.ಇಟ್ನಾಳ

**ಬೆಳಗಾವಿ ವಾರ್ತೆ ಕೊಪ್ಪಳ:** ಮೇ 28ರಂದು ಆಚರಿಸಲಾಗುವ ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಯಾವುದೇ ರೀತಿಯ ಅನಧೀಕೃತ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಣೆಗೆ ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಹೇಳಿದರು.

ಬಕ್ರೀದ್ ಆಚರಣೆ ಸಂದರ್ಭದಲ್ಲಿ ಅನಧೀಕೃತ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ತಡೆಗಟ್ಟುವ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೇ 21ರಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ಜಾನುವಾರು ಹತ್ಯೆ ಪ್ರತಿಭಂಧಕ ಕಾಯ್ದೆ ಮತ್ತು ಸಂರಕ್ಷಣೆ ಅಧಿನಿಯಮ-2020ರ ಅನ್ವಯ ಗೋಹತ್ಯೆ ನಿಷೇಧಿಸಲಾಗಿದೆ. ಎಲ್ಲಾ ವಯಸ್ಸಿನ ಆಕಳು, ಆಕಳು ಕರು, ಹೋರಿ, ಗೂಳಿ ಮತ್ತು 13 ವರ್ಷದೊಳಗಿನ ಎಮ್ಮೆ ಮತ್ತು ಕೋಣಗಳ ಹತ್ಯೆಯನ್ನು ನಿಷೇಧಿಸಲಾಗಿದೆ. ಹದಿಮೂರು ವರ್ಷ ಮೇಲ್ಪಟ್ಟ ಎಮ್ಮೆ ಅಥವಾ ಕೋಣವನ್ನು ಸಕ್ಷಮ ಪ್ರಾಧಿಕಾರಿಯ ಶಿಫಾರಸ್ಸಿನ ಮೇರೆಗೆ ವಧೆಗೆ ಅವಕಾಶ ನೀಡಲಾಗಿದೆ. ಉಳಿದ ಎಲ್ಲ ಜಾನುವಾರುಗಳ ವಧೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಯಾವುದೇ ರೀತಿಯ ಕಾಯ್ದೆ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವ ಅತ್ಯವಶ್ಯಕತೆ ಇದೆ. ಈ ಕುರಿತು ಪಶುಪಾಲನಾ ಇಲಾಖೆ, ಪೊಲೀಸ್ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ತಂಡಗಳನ್ನು ರಚಿಸಿ ಸೂಕ್ತ ನಿಗಾ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್. ಅರಸಿದ್ಧಿ ಅವರು ಮಾತನಾಡಿ, ರಾಜ್ಯ ಹಾಗೂ ಕೇಂದ್ರ ಸರ್ಕಾರವು ನಿಯಮಿಸಿದ ವಿಧಾನದಲ್ಲಿ ಕೃಷಿ ಅಥವಾ ಪಶುಸಂಗೋಪನೆಯ ಉದ್ದೇಶಕ್ಕಾಗಿ ಸಕ್ಷಮ ಪ್ರಾಧಿಕಾರಿಯ ಜಾನುವಾರು ಸಾಗಣೆಯನ್ನು ಪರವಾನಿಗೆ ಪಡೆದು ಜಾನುವಾರು ಸಾಗಣೆ ಮಾಡಬೇಕು. ಅಪರಾಧ ಸಾಬೀತಾದಲ್ಲಿ ಮೂರರಿಂದ ಏಳು ವರ್ಷದವರೆಗೆ ಕಾರವಾಸ ಅಥವಾ ಒಂದು ಜಾನುವಾರಿಗೆ 50 ಸಾವಿರದಿಂದ 5 ಲಕ್ಷಗಳವರೆಗೆ ಜುಲ್ಮಾನೆಗೆ ಅವಕಾಶವಿರುತ್ತದೆ. ಕೃಷಿ ಅಥವಾ ಪಶುಸಂಗೋಪನೆಯ ಉದ್ದೇಶಕ್ಕೆಂದು ರಾತ್ರಿ ವೇಳೆ ಹಸು, ಕರು, ಎತ್ತು, ಎಮ್ಮೆ, ಕೋಣಗಳನ್ನು ಸಾಗಣೆ ಮಾಡುವಂತಿಲ್ಲ. ಪರವಾನಗಿ ಪಡೆದುಕೊಂಡಾಗ್ಯೂ ಮಾಲೀಕತ್ವದ ದಾಖಲೆ ಮತ್ತು ಪಶುವೈದ್ಯಕೀಯ ಪ್ರಥಮ ಚಿಕಿತ್ಸಾ ಪೆಟ್ಟಿಗೆ ಹೊಂದಿರಬೇಕು. ಪರವಾನಿಗೆ ಪಡೆದು ಸಾಗಣೆ ಮಾಡುತ್ತಿದ್ದಲ್ಲಿ ಜಾನುವಾರು ಸಂಖ್ಯೆ, ಕಳುಹಿಸಿದವರು ಮತ್ತು ಪಡೆಯುವವರ ಹೆಸರು, ವಿಳಾಸ, ದೂರವಾಣಿ ಸಂಖ್ಯೆಯನ್ನು ದೊಡ್ಡ ಅಕ್ಷರಗಳಲ್ಲಿ ವಾಹನದ ಮೇಲೆ ಬರೆಯುವುದು ಹಾಗೂ ಜಾನುವಾರುಗಳ ಮಾಲೀಕರು ಮಾಲೀಕತ್ವದ ದಾಖಲೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ ಎಂದರು. ಚೆಕ್‌ಪೋಸ್ಟಗಳಲ್ಲಿ ಪಶುವೈದ್ಯಾಧಿಕಾರಿಗಳನ್ನು ಸಹ ನಿಯೋಜಿಸಬೇಕು ಎಂದು ಹೇಳಿದರು.

ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಅನಧೀಕೃತ ಜಾನುವಾರುಗಳ ಸಾಗಾಟದ ಮೇಲೆ ನಿಗಾವಹಿಸಲು ಪಶು ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳ ಸಹಯೋಗದಲ್ಲಿ ತಂಡಗಳನ್ನು ರಚಿಸಿ ಕ್ರಮ ವಹಿಸಲಾಗುತ್ತಿದೆ. ಜಿಲ್ಲೆಯಲ್ಲಿ 16 ಕಡೆಗಳಲ್ಲಿ ಚೆಕ್‌ಪೋಸ್ಟ್ ಮಾಡಲಾಗುತ್ತದೆ. ಕೊಪ್ಪಳ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಹಿರೇಸಿಂದೋಗಿ ರಸ್ತೆಯ ಶ್ರೀಶೈಲ ನಗರ ಕ್ರಾಸ್ ಹತ್ತಿರ, ಹೊಸಪೇಟೆ ರಸ್ತೆ ಎಸ್.ಎಫ್.ಎಸ್ ಶಾಲೆ ಹತ್ತಿರ, ಗದಗ ರಸ್ತೆಯ ಜಿಲ್ಲಾ ಕ್ರಿಡಾಂಗಣದ ಹತ್ತಿರ ಹಾಗೂ ಕಿನ್ನಾಳ ರಸ್ತೆಯ ಭಾಗ್ಯನಗರ ಕ್ರಾಸ್ ಬಳಿ ಚೆಕ್‌ಪೋಸ್ಟ್ ತೆರೆಯಲಾಗುವುದು. ಅದೇ ರೀತಿ ಮುನಿರಾಬಾದ ಪೊಲೀಸ್ ಠಾಣೆ ವ್ಯಾಪ್ತಿಯ ಎನ್-ಹೆಚ್-50ರಲ್ಲಿ ಬರುವ ಹೊಸಲಿಂಗಾಪುರ-ಹುಲಗಿ ಕ್ರಾಸ್ ಹತ್ತಿರ, ಅಳವಂಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಮುಂಡರಗಿ ರಸ್ತೆಯ ಬೆಳಗಟ್ಟಿಯಲ್ಲಿ, ಯಲಬುರ್ಗಾ ಪೊಲೀಸ್ ಠಾಣೆ ವ್ಯಾಪ್ತಿಯ ಗಜೇಂದ್ರಗಡ ರಸ್ತೆಯಲ್ಲಿನ ಬಂಡಿ ಗ್ರಾಮದಲ್ಲಿ ಹಾಗೂ ಗದಗ ರಸ್ತೆಯ ಸಂಕನೂರು ಕ್ರಾಸ್ ಹತ್ತಿರ, ಗಂಗಾವತಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಆನೆಗೊಂದಿ ರಸ್ತೆಯ ತಹಶೀಲ್ ಆಫಿಸ್ ಹತ್ತಿರ ಹಾಗೂ ಕೊಪ್ಪಳ ರಸ್ತೆಯ ವಡ್ಡರಹಟ್ಟಿ ಕ್ಯಾಂಪ್ ರಸ್ತೆಯಲ್ಲಿ, ಕುಕನೂರು ಪೊಲೀಸ್ ಠಾಣೆ ವ್ಯಾಪ್ತಿಯ ಗದಗ ರಸ್ತೆಯ ಬನ್ನಿಕೊಪ್ಪದಲ್ಲಿ, ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಕಂಪ್ಲಿ ರಸ್ತೆಯಲ್ಲಿನ ಚಿಕ್ಕಜಂತಕಲ್ಲನಲ್ಲಿ ಹಾಗೂ ಹೊಸಪೇಟೆ ರಸ್ತೆಯ ಕಡೇ ಬಾಗಿಲುದಲ್ಲಿ, ಕಾರಟಗಿ ಪೊಲೀಸ್ ಠಾಣೆ ವ್ಯಾಪ್ತಿಯ ಸಿಂಧನೂರು ರಸ್ತೆಯ ಚೆನ್ನಳ್ಳಿ ಕ್ರಾಸ್ ಬಳಿ, ಕುಷ್ಟಗಿ ಪೊಲೀಸ್ ಠಾಣೆ ವ್ಯಾಪ್ತಿಯ ಇಳಕಲ್ಲ ರಸ್ತೆಯಲ್ಲಿನ ಕ್ಯಾದಿಗುಪ್ಪಾ ಕ್ರಾಸ್ ಬಳಿ ಮತ್ತು ತಾವರಗೇರಾ ಠಾಣೆ ವ್ಯಾಪ್ತಿಯಲ್ಲಿ ಬರುವ ಮುದಗಲ್ಲ ರಸ್ತೆಯ ಕಿಲ್ಲಾರ ಹಟ್ಟಿ ಬಳಿ ಸೇರಿ ಜಿಲ್ಲೆಯಲ್ಲಿ ಒಟ್ಟು 16 ಚೆಕ್‌ಪೋಸ್ಟ್ ತೆರೆಯಲಾಗುತ್ತಿದೆ. ಪ್ರಾಣಿ ಬಲಿ ನಿಷೇದ ಕಾಯ್ದೆ-1959 ಕಾಯ್ದೆಯ ಸೆಕ್ಷನ್ (3) ರನ್ವಯ ಸಾರ್ವಜನಿಕ ಸ್ಥಳಗಳಲ್ಲಿ, ಪೂಜಾ



ಸ್ಥಳಗಳಲ್ಲಿ ಮತ್ತು ಅವುಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಯಾವುದೇ ರೀತಿಯ ಪ್ರಾಣಿಯ ಬಲಿಯನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರಾದ ಡಾ. ಪಿ.ಎಂ.ಮಲ್ಲಯ್ಯ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಜಿಲ್ಲೆಯ ವಿವಿಧ ತಾಲ್ಲೂಕಿನ ಪಶುವೈದ್ಯಾಧಿಕಾರಿಗಳು ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಇತರೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತ : ಪ್ರಥಮ ಪಿಯುಸಿ ಪ್ರವೇಶಕ್ಕೆ ಅರ್ಜಿ

ಬಾಗಲಕೋಟೆ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನವನಗರದ ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ ಕಾಲೇಜಿನ 2026-27ನೇ ಸಾಲಿನ ಶೈಕ್ಷಣಿಕ ಪ್ರಥಮ ವರ್ಷದ ಪಿಯುಸಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ತರಗತಿಗಳಿಗೆ ಉಚಿತ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶದಲ್ಲಿ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಶೇ.75 ರಷ್ಟು ಹಾಗೂ ಇತರೆ ವರ್ಗದ ಶೇ.25 ರಷ್ಟು ಪರಿಶಿಷ್ಟ ಜಾತಿ, ಪ.ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ಎಸ್.ಎಸ್.ಎಲ್.ಸಿ, ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವವರು ಅರ್ಜಿ ಫಾರ್ಮ ಭರ್ತಿ ಮಾಡಿ ನವನಗರದ ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ ಕಾಲೇಜ (7411799007) ಅಥವಾ ಅಲ್ಪಸಂಖ್ಯಾತರ ಜಿಲ್ಲಾ ಮಾಹಿತಿ ಕೇಂದ್ರ ಮತ್ತು ತಾಲೂಕಾ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಿ ಅರ್ಜಿ ಸಲ್ಲಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವ ಹಕ್ಕುಗಳ ಮತ್ತು ಸಾಮಾಜಿಕ ನ್ಯಾಯ ಆಯೋಗದ ಘಟಕ ಉದ್ಘಾಟನೆ




ಮೂಡಲಗಿ: ಪಟ್ಟಣದಲ್ಲಿ ನೂತನವಾಗಿ ಅಸ್ತಿತ್ವಕ್ಕೆ ಬಂದ ರಾಷ್ಟ್ರೀಯ ಮಾನವ ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯ ಆಯೋಗ ಮೂಡಲಗಿ ತಾಲೂಕಾ ಘಟಕದ ಉದ್ಘಾಟನೆ ಸಮಾರಂಭವನ್ನು ಇಲ್ಲಿಯ ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ನ್ಯಾಯಾಧೀಶರಾದ ಶ್ರೀಮತಿ ಶಾಂತಮ್ಮ ಮಲ್ಲಿಕಾರ್ಜುನಗೌಡ ಪಿ ಉದ್ಘಾಟಿಸಿದರು.

**ಬೆಳಗಾವಿ ವಾರ್ತೆ ಮೂಡಲಗಿ:** ರಾಷ್ಟ್ರೀಯ ಮಾನವ ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯ ಆಯೋಗ ಮೂಡಲಗಿ ತಾಲೂಕಾ ಘಟಕದ ಉದ್ಘಾಟನೆ ಹಾಗೂ ಕಾನೂನು ಅರಿವು–ನೆರವು ಕಾರ್ಯಕ್ರಮ ಪಟ್ಟಣದ ಶ್ರೀ ಶಿವಬೋಧರಂಗ ಅರ್ಬನ್ ಸೊಸಾಯಿಟಿ ಸಭಾ ಭವನದಲ್ಲಿ ಜರುಗಿತು.

ಘಟಕವನ್ನು ಮತ್ತು ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿದ ಪಟ್ಟಣದ ದಿವಾಣಿ ಹಾಗೂ ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ನ್ಯಾಯಾಧೀಶರಾದ ಶ್ರೀಮತಿ ಶಾಂತಮ್ಮ ಮಲ್ಲಿಕಾರ್ಜುನಗೌಡ ಪಿ ಮಾತಾನಾಡಿ, ಸಮಾಜದಲ್ಲಿ ಪ್ರತಿಯೊಬ್ಬರಿಗೂ ಸಮಾನತೆ ನ್ಯಾಯ ಹಾಗೂ ಸ್ವಾತಂತ್ರ ಸಿಗುವಂತಾಗಬೇಕು, ಸಮಾಜಿಕ ಅನಿಷ್ಠ ಪದ್ಧತಿಗಳಾದ ಬಾಲ್ಯವಿವಾಹ, ಅನಕ್ಷರತೆ, ಬಡತನ , ಮಹಿಳಾ ಶೋಷನೆ ನಿರ್ಮುಲನೆ ಮಾಡಲು ಪ್ರತಿಯೊಬ್ಬರು ಶ್ರಮಿಶಬೇಕು, ಮನೆಯ ಮೊದಲು ಪಾಠ ಶಾಲೆ ಎಂಬಂತೆ ಪ್ರತಿಯೊಬ್ಬರು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು ಎಂದ ಅವರು ಪ್ರತಿಯೊಬ್ಬರು ತಮ್ಮ ಹಕ್ಕುಗಳು ಮತ್ತು ಕಾನೂನ ಬಗ್ಗೆ ಅರಿತುಕೊಳ್ಳಬೇಕೆಂದರು

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ರಾಷ್ಟ್ರೀಯ ಮಾನವ ಹಕ್ಕುಗಳ ಮತ್ತು ಸಾಮಾಜಿಕ ಆಯೋಗದ ಬೆಳಗಾವಿ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷ ಅಶೋಕ ಕೆಂಗನೂರ ಮಾತನಾಡಿ, ಪ್ರತಿ ತಾಲೂಕಿನಲ್ಲಿ ಮಹಿಳಾ ಸಂಘಟನೆಯ ಘಟಕಗಳು ಸ್ಥಾಪನೆಯಾಗಬೇಕು ಎಂದರು.

ನಾಗನೂರದ ಮಾತೋಶ್ರೀ ಡಾ. ಕಾವ್ಯ ಅಮ್ಮನವರು ಮಾತನಾಡಿ, ಸಮಾಜದಲ್ಲಿ ನಡೆಯುತ್ತಿರುವ ಬಾಲ್ಯವಿವಾಹ ಪದ್ಧತಿಯನ್ನು ನಿರ್ಮೂಲನೆ ಮತ್ತು ಮಹಿಳೆಯರಗೆ ಅನ್ಯಾಯವಾದರೆ ಸಂಘಟನೆಯಿಂದ ನ್ಯಾಯಕೊಡಿಸಲು ಶ್ರಮಿಸಬೇಕೆಂದರು.

ಮುಖ್ಯ ಅತಿಥಿಗಳಾಗಿ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ವೈದ್ಯಧಿಕಾರಿ ಡಾ.ಭಾರತಿ ಕೋಣಿ, ಇಂದ್ರಿರಾ ಬೋವಿ, ಸುನೀತಾ ಐಹೊಳೆ, ವೈಶಾಲಿ ಬರಬರೆ, ಮೂಡಲಗಿ ನ್ಯಾಯವಾಧಿಗಳ ಸಂಘದ ಅಧ್ಯಕ್ಷ ಅರ್. ಆರ್. ಬಾಗೋಜಿ, ವಕೀಲ ವಿನೋಧ ಪಾಟೀಲ, ರೂಪಾ ಕಾಂಬಳೆ, ಸವಿತಾ ಕಾಂಬಳೆ, ವೆಂಕಟೇಶ ಬಾಲರಡ್ಡಿ ಉಪಸ್ಥಿತರಿದ್ದರು.

ಆಯೋಗದ ತಾಲೂಕ ಘಟಕ ಸದಸ್ಯರಾದ ಸುಶೀಲಾ ಕೌಜಲಗಿ, ಶ್ರೀದೇವಿ ಮಗದುಮ್ಮ, ಮಹಾದೇವಿ ಕುದರಿ, ಶೋಭಾ ಕಮ್ಮಾರ, ಲಕ್ಷ್ಮೀ ಫಿರೋಜಿ, ರಾಜಶ್ರೀ ಆಡಿಬಟ್ಟಿ, ಶಿಲ್ಪಶ್ರೀ ದಂಡವಾಡ, ಜ್ಯೋತಿ ಢವಳೇಶ್ವರ್ , ಕಸ್ತೂರಿ ಹೆಗ್ಗಾಣಿ, ಸವಿತಾ ಪಾಟೀಲ್ ರೂಪ ಸೋನವಾಲಕರ ಮತ್ತು ಅಂಗನವಾಡಿ ಮತ್ತು ಆಶಾ ಕಾರ್ಯ ಕರ್ತರು ಮತ್ತಿತರರು ಉಪಸ್ಥಿತರಿದ್ದರು.

ಆಯೋಗದ ಮೂಡಲಗಿ ತಾಲೂಕಾ ಘಟಕದ ಅಧ್ಯಕ್ಷೆ ಉಜ್ವಲಾ ಕುರಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿದ್ಯಾ ಜಂಜರವಾಡ ಸ್ವಾಗತಿಸಿದರು ಶಶಿರೇಖಾ ಬೆಳ್ಳಕ್ಕಿ ನಿರೂಪಿಸಿದರು, ಶ್ರೀದೇವಿ ಭಸ್ಮೆ ವಂದಿಸಿದರು.

# ಪತ್ರಕರ್ತ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ



**ಬೆಳಗಾವಿ ವಾರ್ತೆ ಕುಂದಗೋಳ:** ಪತ್ರಕರ್ತರು ತಮ್ಮ ಕುಟುಂಬ ಸಮಸ್ಯೆಗಳನ್ನು ಬದಿಗೊತ್ತಿ, ಸಮಾಜಕ್ಕಾಗಿ ಹಗಲಿರುಳು ಶ್ರಮಿಸುತ್ತಿದ್ದು, ರಾಜಕಾರಣಿಗಳು–ಅಧಿಕಾರಿಗಳನ್ನು ಎಚ್ಚರಿಸುವ ಅವರ ಕಾರ್ಯ ಶ್ಲಾಘನೀಯ ಎಂದು ಶಾಸಕ ಎಮ್.ಆರ್.ಪಾಟೀಲ್ ಹೇಳಿದರು.

ತಾಲೂಕು ಪಂಚಾಯತ್ ಸಭಾಭವನದಲ್ಲಿ ನಡೆದ ತಾಲೂಕು ಕಾರ್ಯನಿರತ ಪತ್ರಕರ್ತ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅನೇಕ ಹಳ್ಳಿಗಳಿಗೆ ತೆರಳುವ ಪತ್ರಕರ್ತರು ಆಯಾ ಸಮಸ್ಯೆಗಳ ಬಗ್ಗೆ ವರದಿ ಮಾಡುತ್ತಾರೆ. ಅಂತಹ ಸಂದರ್ಭದಲ್ಲಿ ನಮಗೂ ಕೂಡ ಸಮಸ್ಯೆ ಬಗ್ಗೆ ಮನವರಿಕೆ ಮಾಡಿ ಜಟಿಲತೆಯನ್ನು ಸಡಿಲಗೊಳಿಸಿ, ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ನುಡಿದರು.

ಮಾಜಿ ಶಾಸಕ ಎಸ್.ಐ.ಚಿಕ್ಕನಗೌಡ್ರ ಮಾತನಾಡಿ, ಪತ್ರಕರ್ತರಿಂದ ಕ್ಲಿಷ್ಟ ಕಾರ್ಯ ಸರಾಗವಾಗುತ್ತವೆ. ಈ ನಿಟ್ಟಿನಲ್ಲಿ ಅವರಿಂದ ಇನ್ನೂ ಹೆಚ್ಚಿನ ಸಮಾಜಮುಖಿ ಕಾರ್ಯಗಳಾಗಲಿ ಎಂದರು. ಸಾನಿಧ್ಯ ವಹಿಸಿದ್ದ ಶಿವಾನಂದ ಮಠದ ಶ್ರೀಗಳು ಆಶೀರ್ವಚನ ನೀಡಿ, ಪತ್ರಿಕೆಯ ಮಹತ್ವದ ಬಗ್ಗೆ ಇಂದಿನ ಯುವ ಪೀಳಿಗೆಗಳಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು, ಪತ್ರಿಕೆ ಓದುವುದರಿಂದ ಮಕ್ಕಳಲ್ಲಿ ಜ್ಞಾನವೃದ್ದಿಯಾಗುತ್ತದೆ ಎಂದರು.

ನೂತನ ಅಧ್ಯಕ್ಷ ಅಶೋಕ ಘೋರ್ಪಡೆ, ಕಾರ್ಯದರ್ಶಿ ಬಸವರಾಜ ದೀಪಳ್ಳಿ, ಖಜಾಂಚಿ ಶೇಖಪ್ಪ ಕುಂದಗೋಳ ಅವರಿಗೆ ಶ್ರೀಗಳು ಪದಗ್ರಹಣ ನಡೆಸಿಕೊಟ್ಟರು. ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವೈಷ್ಣವಿ ಬಾಗಲ್, ತನ್ಮಯಿ ಹೆಬಸೂರ, ಕುಸುಮಾ ಪಾಟೀಲ್, ಪವಿತ್ರಾ ಮುದ್ದೆಪ್ಪನವರ, ಮನುಶ್ರೀ ಕುರ್ತಕೋಟಿ ಅವರನ್ನು ಸನ್ಮಾನಿಸಿ–ಗೌರವಿಸಲಾಯಿತು.

ಪಂಚಗ್ರಹ ಹಿರೇಮಠದ ಶಿಥಿಕಂಠೇಶ್ವರ ಶ್ರೀಗಳು, ಕಲ್ಯಾಣಪೂರ ಅಭಿನವ ಬಸವಣ್ಣಜ್ಜನವರು ಸಾನಿಧ್ಯ ವಹಿಸಿದ್ದರು. ತಹಶೀಲ್ದಾರ ರಾಜು ಮಾವರಕರ, ಪಶು ವೈದ್ಯಾಧಿಕಾರಿ ಡಾ. ಹನುಮಂತಗೌಡ್ ಪಾಟೀಲ್, ಪಿ.ಎಸ್.ಐ. ಶರಣಬಸಪ್ಪ ಸಂಗಳದ, ತಾಲೂಕು ನೌಕರ ಸಂಘದ ಅಧ್ಯಕ್ಷ ಮುತ್ತಣ್ಣ ಅಣ್ಣಿಗೇರಿ, ಹೊಂಬೆಳಕು ಫೌಂಡೇಶನ್ ಅಧ್ಯಕ್ಷ ವಿದ್ಯಾಧರ ಸುಂಕದ, ಕೆಸಿಸಿ ಬ್ಯಾಂಕ್ ನಿರ್ದೇಶಕ ಉಮೇಶ್ ಹೆಬಸೂರ ಹಾಗೂ ಕಾನಿಪ ಸಂಘದ ಸದಸ್ಯರಾದ ಗಂಗಾಧರ ಡಾಂಗೆ, ವಾಯ್.ಡಿ.ಹೊಸೂರ, ಬಸವರಾಜ ಗುಡ್ಡದಕೇರಿ, ರವಿ ಕಮಡೊಳ್ಳಿ, ಸುನೀಲ್ ಕರೋಗಲ್, ಪ್ರವೀಣ ಗಿಡಸಕ್ಕನವರ, ದುರ್ಗಪ್ಪ ಗೊಲ್ಲರ ಹಾಗೂ ನಾಗರಾಜ ಮಧುಭಾವಿ ಇತರರಿದ್ದರು.

# ವಿದ್ಯುತ್ ಅವಘಡಕ್ಕೆ ಬ್ರೇಕ್: ಕವರ್ಡ್ ಕೇಬಲ್ ಕಂಡಕ್ಟರ್ ಅಳವಡಿಕೆ

**ಬೆಳಗಾವಿ ವಾರ್ತೆ ಅಥಣಿ:** ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಅಥಣಿ ಉಪವಿಭಾಗದ ವತಿಯಿಂದ ಪಟ್ಟಣದ ಜನದಟ್ಟಣೆ ಪ್ರದೇಶಗಳು ಹಾಗೂ ಮುಖ್ಯ ರಸ್ತೆಗಳಲ್ಲಿ ಕವರ್ಡ್ ಕೇಬಲ್ ಕಂಡಕ್ಟರ್ ಮತ್ತು ಸ್ಪನ್ ಪೋಲ್ ಡಿಎಸಿ ಅಳವಡಿಸುವ ಕಾಮಗಾರಿಗೆ ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಅವರು ಕಾಮಗಾರಿಗೆ ಚಾಲನೆ ನೀಡಿದರು.



ಪಟ್ಟಣದಲ್ಲಿ ಹಳೆಯದಾಗಿರುವ ಬರಿದಾದ ವಿದ್ಯುತ್ ತಂತಿಗಳಿಂದ ಆಗುತ್ತಿರುವ ಅವಘಡಗಳನ್ನು ತಪ್ಪಿಸಲು ಹಾಗೂ ನಿರಂತರ ವಿದ್ಯುತ್ ಪೂರೈಕೆಗಾಗಿ 4.33 ಕೋಟಿ ರೂ.ಗಳ ಕವರ್ಡ್ ಕೇಬಲ್ ಅಳವಡಿಸಲಾಗುತ್ತಿದೆ ಇದರಿಂದ ಮಳೆಗಾಲದಲ್ಲಿ ತಂತಿ ತುಂಡಾಗಿ ಬೀಳುವ, ಶಾರ್ಟ್ ಸರ್ಕ್ಯೂಟ್ ಆಗುವ ಸಮಸ್ಯೆಗಳಿಗೆ ಪರಿಹಾರ ದೊರೆಯಲಿದೆ.

ಈ ವೇಳೆ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು ಅಥಣಿ ಪಟ್ಟಣದ ಸುರಕ್ಷತೆ ನಮ್ಮ ಮೊದಲ ಆದ್ಯತೆ ಹಳೆಯ ತಂತಿಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿತ್ತು ಈಗ ಕವರ್ಡ್ ಕೇಬಲ್ ಅಳವಡಿಕೆಯಿಂದ ವಿದ್ಯುತ್ ನಷ್ಟ ಕಡಿಮೆಯಾಗಿ ಗುಣಮಟ್ಟದ ವಿದ್ಯುತ್ ಪೂರೈಕೆಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಶೀವಲೀಲಾ ಬುಟಾಳಿ, ಉಪಾದ್ಯಕ್ಷ ಭುವನೇಶ್ವರ ಯಕ್ಕಂಚಿ ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್,ರಾಜಶೇಖರ ಗುಡೊಡಗ,ಸಯುದ್ ಅಮಿನ್ ಗದ್ಯಾಳ,ಪ್ರಮೋದ ಬಿಳ್ಳೂರ,ಮಲ್ಲು ಬುಟಾಳಿ,ರಾಜು ಬುಲಬುಲೆ,ಬಾಬು ಖೇಮಲಾಪೂರ, ಶಿವು ನಾಯಿಕ, ಆನಂದ ಟೋಣಪೆ,ರಾಜು ಆಲಬಾಳ,ಗುತ್ತಿಗೆದಾರರಾದ ಅಮೀರ ಖತೀಬ,ಸಂಗಮೇಶ ನಾರಗೊಂಡ,ಶಿವಲಿಂಗ ಕೊಕಳೆ,ಹೆಸ್ಕಾಂ ಇಲಾಖೆಯ,ಜಿ ಸಂಪನ್ನವರ,ಶಬ್ಬಿರ್ ಪಾರ್ಥನಹಳ್ಳಿ, ಮುಖ್ಯಾಧಿಕಾರಿ ಅಶೋಕ ಗುಡಿಮನಿ, ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಇಂದು ಜಿಲ್ಲಾ ಯೋಜನಾ ಸಮಿತಿ ಸಭೆ

**ಬೆಳಗಾವಿ ವಾರ್ತೆ ಗದಗ:** ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಮೇ 25 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಅಡಿಟೋರಿಯಂ ಹಾಲ್‌ದಲ್ಲಿ ಗದಗ ಜಿಲ್ಲಾ ಯೋಜನಾ ಸಮಿತಿ ಸಭೆ ಯನ್ನು ಏರ್ಪಡಿಸಲಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರಿನ ಘಟಕದ ಉದ್ಘಾಟನೆ , ಮತ್ತು ಭದ್ರತಾ ಕೊಠಡಿಯ ಉದ್ಘಾಟನೆ; ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ



ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡದ ಪರಸರದಲ್ಲಿ ಶಾಸಕ ವಿಶ್ವಾಸ್ ವೈದ್ಯ ಸಸಿ ನೆಡುವುದರ ಮೂಲಕ ಚಾಲನೆ ನೀಡಿದರು.

**ಬೆಳಗಾವಿ ವಾರ್ತೆ ಉಗರಗೋಳ:** ಶ್ರೀರೇಣುಕಾ ಯಲ್ಲಮ್ಮನ ಕ್ಷೇತ್ರ, ಬಂಡೆಗಲ್ಲುಗಳಿಂದ ಕೂಡಿರುವ ಪ್ರದೇಶ. ಇಲ್ಲಿ ಸಸಿ ನೆಟ್ಟು ಪೋಷಿಸುವುದು ಸವಾಲಿನ ಕೆಲಸ, ಹೀಗಾಗಿ ಪ್ರತಿಯೊಬ್ಬರು ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಿಸಲು ಶ್ರಮಿಸಬೇಕು ಎಂದು ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಉಪಾದ್ಯಕ್ಷ ಶಾಸಕ ವಿಶ್ವಾಸ್ ವೈದ್ಯ ಹೇಳಿದರು.

ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡದಲ್ಲಿ ಶನಿವಾರ ರಂದು ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡದ ಸಂಯುಕ್ತ ಆಶ್ರಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕದ ಉಧ್ಘಾಟನೆ, ಮತ್ತು ಭದ್ರತಾ ಕೊಠಡಿಯ ಉಧ್ಘಾಟನೆ ಹಾಗೂ ಯಲ್ಲಮ್ಮನ ಗುಡ್ಡದ ಸೌಂದರ್ಯಕರಣ, ನೆರಳಿನ ದೃಷ್ಟಿಯಿಂದ ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು.

ಬೆಟ್ಟ, ಗುಡ್ಡ, ಪರ್ವತಗಳಲ್ಲಿ ಸಸಿ ನೆಡುವವರಿಗಿಂತ, ಅದರಿಂದ ದೂರ ಉಳಿಯುವವರೇ ಹೆಚ್ಚು. ಆದರೆ, ಇಲ್ಲಿನ ಸಿಬ್ಬಂದಿ ಬಂಡೆಗಲ್ಲಿನಿಂದ ಆವೃತವಾದ ಗುಡ್ಡದ ನಡುವೆಯೂ ಸಾವಿರಾರು ಸಸಿಗಳನ್ನು ನೆಟ್ಟು ಬೆಳೆಸುವ ಮೂಲಕ ಎಲ್ಲರಲ್ಲೂ ಬೆರುಗು ಮೂಡಿಸಲಿದ್ದಾರೆ ಎಂದ ಅವರು ಧರ್ಮ ದರ್ಶನದ ಸರತಿ ಸಾಲಿನಲ್ಲಿ ಭಕ್ತರಿಗೆ ಶುದ್ದ ಕುಡಿಯುವ ನೀರಿನ ನಳಗಳನ್ನು ಮಾಡಲಾಗಿದೆ ಎಂದರು.

ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಶಿದ್ದನಗೌಡ ಗೂಡರಾಶಿ, ಮಾತನಾಡಿ. ಇಂದಿನ ದಿನಗಳಲ್ಲಿ ನಗರೀಕರಣದ ಪ್ರವಾವದಿಂದ ಪರಿಸರ ನಾಶವಾಗುತ್ತಿದೆ. ನೈಸರ್ಗಿಕ ಸಂಕುಲಗಳಿಗೆ ಆಪತ್ತು ಬಂದಿದೆ. ಹೀಗಾಗಿ ದೇವಸ್ಥಾನದ ಪ್ರದೇಶಗಳಲ್ಲಿ, ರೈತರು, ಹೊಲಗದ್ದೆಗಳಲ್ಲಿ, ಶಾಲೆಗಳಲ್ಲಿ, ತಮ್ಮ ಮನೆಯ ಅಂಗಳ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಕಾರ್ಯಧರ್ಶಿ ಪ್ರಭವತಿ ಫಕೀರಪೂರ, ಮಲ್ಲು ಜಕಾತಿ, ಶಿವಾನಂದ ಪಟ್ಟಣಶೆಟ್ಟಿ, ನಾಗರತ್ನಾ ಚೋಳಿನ, ಮಂಜುನಾಥ ಅಂಗಡಿ, ಅಲ್ಲಮಪ್ರಭು ಪ್ರಭುನವರ, ಆರ್ ಎಚ್ ಸವದತ್ತಿ, ಸಿ ಎನ್ ಕುಲಕರ್ಣಿ, ನಾಗರಾಜ ಬಡೆಪ್ಪನವರ, ಶ್ರೀಧರ ಇನಗಂಟಿ(ಬಾಲಾಜಿ) ನೀಲಪ್ಪ ಶಿದ್ದಕ್ಕನವರ, ಪ್ರಕಾಶ ಲಮಾಣಿ, ಡಿ ಆರ್ ಚವ್ಹಾಣ, ಅಭಿಷಕ ತಿಪರಾಶಿ, ಪ್ರವೀಣ ರಾಮಪ್ಪನವರ, ಎಎಸ್‌ಆಯ್ ಪುಂಡಲೀಕ ಪರೀಟ್, ಏಕನಗೌಡ ಮುದ್ದನಗೌಡ್ರ, ಗೋವಿಂದಗೌಡ ತಿಪರಾಶಿ, ಅನೀಲ ಗುಡಿಮನಿ, ಸಂತೋಷ ಕಲಾಲ, ಹಾಗೂ ಅಧಿಕಾರಿಗಳು ಮತ್ತು ದೇವಸ್ಥಾನ ಸಿಬ್ಬಂದಿ ಇದ್ದರು.

# ಶಾಸಕ ರಾಜು ಕಾಗೆ ನೇತೃತ್ವದಲ್ಲಿ ಕಾಗವಾಡ ಕ್ಷೇತ್ರದ ಅಭಿವೃದ್ಧಿಗೆ ಚಾಲನೆ



**ಬೆಳಗಾವಿ ವಾರ್ತೆ ಮೋಳೆ:**–ಸತತ ಬರಗಾಲಕ್ಕೆ ತುತ್ತಾದ ಈ ಭಾಗಕ್ಕೆ ಪ್ರಥಮ ಹಂತದ ಬಸವೇಶ್ವರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಮೂಲಕ ಈ ಭಾಗಕ್ಕೆ ನೀರೋದಗಿಸಿದ ಶಾಸಕ ರಾಜು ಕಾಗೆಯವರು ಅಧುನಿಕ ಭಗಿರಥ ಎಂದು ಪ.ಪೂ.ಶ್ರೀ ವಿಠ್ಠಲ ಮಹಾರಾಜರು ಅಭಿಪ್ರಾಯ ವ್ಯಕ್ತ ಪಡಿಸಿದರು.

ಕಾಗವಾಡ ಶಾಸಕ ರಾಜು ಕಾಗೆಯವರ ನಿರ್ದೇಶನ ಮೇರೆಗೆ ಶುಕ್ರವಾರ ತೆವರಟ್ಟಿಯಿಂದ ಬಿರಾದಾರ ವಸತಿ ವರೆಗಿನ ಮತ್ತು ತೆವರಟ್ಟಿ ರಸ್ತೆ ಕಾಮಗಾರಿಗೆ ಅಗ್ರಾಣಿ ನದಿ ಇಂಗಳಗಾಂವ ಮತ್ತು ತೆವರಟ್ಟಿ ಗ್ರಾಮದ ಮುಖಂಡರು ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಶಾಸಕ ರಾಜು ಕಾಗೆಯವರು ಕೇಂದ್ರ ಸ್ಥಾನದಲ್ಲಿರದಿದ್ದರೂ ಕೂಡ ಅಭಿವೃದ್ಧಿ ಕಾಮಗಾರಿಗಳು ಕುಂಟಿತಗೊಳ್ಳಬಾರದು ಎಂದು ಅವರು ಮುಖಂಡರ ನೇತ್ರತ್ವದಲ್ಲಿ ಕಾಮಗಾರಿಗೆ ಚಾಲನೆ ನೀಡಿದ್ದಾರೆ ಎಂದರು.

ಶಾಸಕ ರಾಜು ಕಾಗೆ ನೇತೃತ್ವದಲ್ಲಿ ಕಾಗವಾಡ ಮತಕ್ಷೇತ್ರದಲ್ಲಿ ರಸ್ತೆ, ಕುಡಿಯುವ ನೀರು, ವಿದ್ಯುತ್, ಶಿಕ್ಷಣ, ಆರೋಗ್ಯ ಸೇರಿ ದಂತೆ ಅಗತ್ಯ ಮೂಲ ಭೂತ ಸೌಲಭ್ಯಗಳ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಕಾಗವಾಡ ಕ್ಷೇತ್ರವನ್ನು ಸಮಗ್ರ ಅಭಿವೃದ್ಧಿಗೊಳಿಸುತ್ತಿದ್ದಾರೆ ಎಂದು ಹಲವಾರು ಮುಖಂಡರು ಅಭಿಪ್ರಾಯ ವ್ಯಕ್ತ ಪಡಿಸಿದರು.

ಶಾಸಕ ರಾಜು ಕಾಗೆಯವರ ಆಪ್ತ ಸಹಾಯಕ ಕುಮಾರ ಪಾಟೀಲ, ಜಿಲ್ಲಾ ಪಂಚಾಯತ ಅಧಿಕಾರಿ ವೀರಣ್ಣಾ ವಾಲಿ, ಗುತ್ತಿಗೆದಾರರಾದ ಬಸವರಾಜ ನಾಯಿಕ, ಶಿವಪುತ್ರ ನಾಯಿಕ, ಸಿದ್ಧಾರೂಢ ನ್ಯಾಮಗೌಡರ, ಸೋವಿತ್ ಪಾಟೀಲ, ವಿಠ್ಠಲ್ ಮಹಾರಾಜರು, ದಿಲೀಪ ಪೂಜಾರಿ, ಅರ್ಜುನ ಪೂಜಾರಿ, ಸುರೇಶ ಪಾಟೀಲ, ಸತೀಶ ಪಾಟೀಲ, ಎಮ್.ಎ.ನಿಲಜಗಿ, ಮುರಿಗೆಪ್ಪಾ ನಿಲಜಗಿ, ಅಪ್ಪಾಸಾಬ ಘಟನಟ್ಟಿ, ಸುಕುಮಾರ ಅನಗಾಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಳೆದುಹೋದ 24 ಮೊಬೈಲ್‌ಗಳು ವಾರಸುದಾರರಿಗೆ ಹಸ್ತಾಂತರ ಸಿಇಐಆರ್ ಪೋರ್ಟಲ್ ಮೂಲಕ ಪತ್ತೆ: ಸಿಪಿಐ ಸಂತೋಷ ಹಳ್ಳೂರ ಮಾಹಿತಿ

**ಬೆಳಗಾವಿ ವಾರ್ತೆ ಅಥಣಿ:** ಅಥಣಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳೆದುಹೋದ ಹಾಗೂ ಕಳುವಾದ ಮೊಬೈಲ್‌ಗಳನ್ನು ಪತ್ತೆಹಚ್ಚುವ ಕಾರ್ಯಾಚರಣೆಯಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ ಕೇಂದ್ರ ಸರ್ಕಾರದ ಸಿಇಐಆರ್ (CEIR) ಪೋರ್ಟಲ್ ಮೂಲಕ ಪತ್ತೆಯಾದ ಒಟ್ಟು 24 ಮೊಬೈಲ್ ಗಳನ್ನು ವಶಪಡಿಸಿಕೊಂಡು ಅವುಗಳ ವಾರಸುದಾರರಿಗೆ ಹಿಂದಿರುಗಿಸಲಾಗಿದೆ ಎಂದು ಅಥಣಿ ಸಿಪಿಐ ಸಂತೋಷ ಹಳ್ಳೂರ ತಿಳಿಸಿದ್ದಾರೆ.

ಈ ಕುರಿತುಮಾಹಿತಿ ನೀಡಿರುವ ಅವರು, ಸಾರ್ವಜನಿಕರು ತಮ್ಮ ಮೊಬೈಲ್ ಕಳೆದುಕೊಂಡರೆ ಅಥವಾ ಕಳುವಾದರೆ ತಕ್ಷಣ ಕೆಎಸ್ಪಿ ಆ್ಯಪ್ ಡೌನಲೋಡ ಮಾಡಿ http://




ceir.gov.in ಪೋರ್ಟಲ್‌ಗೆ ಭೇಟಿ ನೀಡಿ ದೂರು ದಾಖಲಿಸಬೇಕು ದೂರಿನಲ್ಲಿ ಮೊಬೈಲ್‌ನ IMEI ಸಂಖ್ಯೆ, ಕಳೆದುಹೋದ ದಿನಾಂಕ, ಸ್ಥಳ ಸೇರಿದಂತೆ ಅಗತ್ಯ ಮಾಹಿತಿಯನ್ನು ಸಲ್ಲಿಸಿದರೆ ಮೊಬೈಲ್ ಪತ್ತೆ ಹಚ್ಚಲು ಸುಲಭವಾಗುತ್ತದೆ ಅಇಐಖ ವ್ಯವಸ್ಥೆಯಿಂದ ಮೊಬೈಲ್‌ನ ಪ್ರಸ್ತುತ ಸ್ಥಳ ಹಾಗೂ ಬಳಕೆಯಲ್ಲಿರುವ ಸಿಮ್‌ನ ಮಾಹಿತಿ ಲಭ್ಯವಾಗುತ್ತದೆ ಇದರ ಆಧಾರದ ಮೇಲೆ ಪೊಲೀಸರು ಕಾರ್ಯಾಚರಣೆ ನಡೆಸಿ ಮೊಬೈಲ್ ಗಳನ್ನು ವಶಕ್ಕೆ ಪಡೆಯುತ್ತಿದ್ದಾರೆ ಎಂದರು

ಇನ್ನೂ ಪಿಎಸ್‌ಐ ಗಿರಿಮಲ್ಲಪ್ಪ ಉಪ್ಪಾರ ಮಾತನಾಡಿ ಸಾರ್ವಜನಿಕರು ಮೊಬೈಲ್ ಕಳೆದುಕೊಂಡ ತಕ್ಷಣವೇ ಹತ್ತಿರದ ಪೊಲೀಸ್ ಠಾಣೆಯಲ್ಲಿ ದೂರು ನೀಡುವುದರ ಜೊತೆಗೆ CEIR ಪೋರ್ಟಲ್‌ನಲ್ಲೂ ನೋಂದಾಯಿಸಿ. ಖಒಇಖ ಸಂಖ್ಯೆಯನ್ನು #06# ಡಯಲ್ ಮಾಡುವ ಮೂಲಕ ಪಡೆಯಬಹುದು ಬಿಲ್ ಮತ್ತು ಬಾಕ್ಸ್ ಜೋಪಾನವಾಗಿ ಟ್ಟುಕೊಳ್ಳಿ.

ಕಳೆದ ಕೆಲ ತಿಂಗಳುಗಳಲ್ಲಿ ಅಥಣಿ ಪೊಲೀಸರು ಅಇಖಖ ಸಹಾಯ ದಿಂದ ಹಲವು ಮೊಬೈಲ್‌ಗಳನ್ನು ಪತ್ತೆ ಮಾಡಿದ್ದು, ಈ ಬಾರಿ ಒಂದೇ ಸಲ 24 ಮೊಬೈಲ್‌ಗಳನ್ನು ವಾರಸುದಾರರಿಗೆ ಹಸ್ತಾಂತರಿಸಲಾಗಿದೆ ಎಂದರು.

ಪೊಲೀಸರ ಈ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001